ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 188

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

ಶನಿವಾರ: 04–07–2026

## ರಾಜ್ಯದಲ್ಲಿ ಪೊಲೀಸ್ ಮೂಲಸೌಕರ್ಯ ಬಲವರ್ಧನೆಗೆ ಸಚಿವ ಸಂಪುಟದ ಮಹತ್ವದ ನಿರ್ಣಯ 10 ಹೊಸ ಪೊಲೀಸ್ ಠಾಣೆಗಳ ಕಟ್ಟಡ ನಿರ್ಮಾಣಕ್ಕೆ ಅನುಮೋದನೆ: ಸಚಿವ ಪ್ರಿಯಾಂಕ್ ಖರ್ಗೆ



**ಕಲಬುರಗಿ,ಜು.3–**ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ಹಾಗೂ ಸಾರ್ವಜನಿಕರಿಗೆ ಪೊಲೀಸ್ ಸೇವೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ತಲುಪಿಸುವ ಉದ್ದೇಶದಿಂದ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ 10 ಹೊಸ ಪೊಲೀಸ್ ಠಾಣೆಗಳ ಕಟ್ಟಡ ನಿರ್ಮಾಣಕ್ಕೆ ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಮಹತ್ವದ ಅನುಮೋದನೆ ನೀಡಲಾಗಿದೆ ಎಂದು ಗೃಹ, ಮಾಹಿತಿ ಹಾಗೂ ಜೈವಿಕ ತಂತ್ರಜ್ಞಾನ ಮತ್ತು ಇ-ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

2026–27ನೇ ಸಾಲಿನ ಬಜೆಟ್‌ನಲ್ಲಿ ಘೋಷಿಸಲಾಗಿದ್ದಂತೆ, ರಾಜ್ಯದ ವಿವಿಧ ಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೊಲೀಸ್ ಠಾಣೆಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡುವ ಉದ್ದೇಶದಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ. ಈ ಯೋಜನೆಯಡಿ ಒಟ್ಟು 30 ಕೋಟಿ ಅನುದಾನವನ್ನು ಮಂಜೂರು ಮಾಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ

ಈ ಯೋಜನೆಯಡಿ ಕೆಳಕಂಡ 10 ಪೊಲೀಸ್ ಠಾಣೆಗಳಿಗೆ ಆಧುನಿಕ ಕಟ್ಟಡಗಳು ನಿರ್ಮಾಣವಾಗಲಿವೆ: 1.ಉಪ್ಪಿನಂಗಡಿ ಪೊಲೀಸ್ ಠಾಣೆ–ದಕ್ಷಿಣ ಕನ್ನಡ ಜಿಲ್ಲೆ, 2.ಕುಂದಗೋಳ ಪೊಲೀಸ್ ಠಾಣೆ–ಧಾರವಾಡ ಜಿಲ್ಲೆ, 3.ಅರಸೀಕೆರೆ ಗ್ರಾಮಾಂತರ ಪೊಲೀಸ್ ಠಾಣೆ–ಹಾಸನ ಜಿಲ್ಲೆ, 4.ಸುರಪುರ ಪೊಲೀಸ್ ಠಾಣೆ–ಯಾದಗಿರಿ ಜಿಲ್ಲೆ, 5.ಮುದ್ದೇಬಿಹಾಳ ಪೊಲೀಸ್ ಠಾಣೆ–ವಿಜಯಪುರ ಜಿಲ್ಲೆ, 6.ಕುಷ್ಟಗಿ ಪೊಲೀಸ್ ಠಾಣೆ–ಕೊಪ್ಪಳ ಜಿಲ್ಲೆ, 7.ಸಿರವಾರ ಪೊಲೀಸ್ ಠಾಣೆ–ರಾಯಚೂರು ಜಿಲ್ಲೆ, 8.ಸಕಲೇಶಪುರ ಗ್ರಾಮಾಂತರ ಪೊಲೀಸ್ ಠಾಣೆ–ಹಾಸನ ಜಿಲ್ಲೆ, 9.ಬಸವನಬಾಗೇವಾಡಿ ಪೊಲೀಸ್ ಠಾಣೆ–ವಿಜಯಪುರ ಜಿಲ್ಲೆ, 10.ಹುಣಸೂರು ಗ್ರಾಮಾಂತರ ಪೊಲೀಸ್ ಠಾಣೆ–ಮೈಸೂರು ಜಿಲ್ಲೆ.

ಈ ಹೊಸ ಕಟ್ಟಡಗಳು ನಿರ್ಮಾಣವಾದ ನಂತರ ಪೊಲೀಸ್ ಸಿಬ್ಬಂದಿಗೆ ಉತ್ತಮ ಕಾರ್ಯಪರಿಸರ ದೊರೆಯಲಿದ್ದು, ಸಾರ್ವಜನಿಕರಿಗೆ ವೇಗವಾದ ಹಾಗೂ ಸುಲಭ ಪೊಲೀಸ್ ಸೇವೆ ಒದಗಿಸಲು ಸಾಧ್ಯವಾಗುತ್ತದೆ. ರಾಜ್ಯದಲ್ಲಿ ಬೆಳೆಯುತ್ತಿರುವ ಭದ್ರತಾ ಸವಾಲುಗಳನ್ನು ಎದುರಿಸಲು ಪೊಲೀಸ್ ಇಲಾಖೆಯ ಮೂಲಸೌಕರ್ಯವನ್ನು ಆಧುನೀಕರಿಸುವುದು ಸರ್ಕಾರದ ಆದ್ಯತೆಯಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ರಾಜ್ಯ ಸರ್ಕಾರವು ನಾಗರಿಕರ ಸುರಕ್ಷತೆ ಮತ್ತು ಕಾನೂನು ಸುವ್ಯವಸ್ಥೆಯನ್ನು ಅತ್ಯುನ್ನತ ಆದ್ಯತೆಯಾಗಿ ಪರಿಗಣಿಸಿದ್ದು, ಪೊಲೀಸ್ ಇಲಾಖೆಯನ್ನು ತಂತ್ರಜ್ಞಾನ ಹಾಗೂ ಮೂಲಸೌಕರ್ಯದ ದೃಷ್ಟಿಯಿಂದ ಇನ್ನಷ್ಟು ಬಲಿಷ್ಠಗೊಳಿಸುವ ಕಾರ್ಯವನ್ನು ನಿರಂತರವಾಗಿ ಮುಂದುವರಿಸಲಾಗುತ್ತಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಈ ನಿರ್ಧಾರದಿಂದ ರಾಜ್ಯದ ಪೊಲೀಸ್ ವ್ಯವಸ್ಥೆ ಮತ್ತಷ್ಟು ಜನಸ್ನೇಹಿ, ಪರಿಣಾಮಕಾರಿ ಮತ್ತು ಆಧುನಿಕವಾಗಲಿದ್ದು, ಸಾರ್ವಜನಿಕ ಸೇವಾ ವಿತರಣೆಯಲ್ಲಿ ಹೊಸ ಗುಣಮಟ್ಟವನ್ನು ನಿರ್ಮಿಸಲಿದೆ ಎಂದು ಗೃಹ ಸಚಿವರು ಹೇಳಿದ್ದಾರೆ.

## ದೇವದುರ್ಗ ದುರಂತ ಸ್ಥಳಕ್ಕೆ ಸಂಸದ ಜಿ. ಕುಮಾರ ನಾಯಕ ಭೇಟಿ



ಧೈರ್ಯದ ದಾರಿ

**ರಾಯಚೂರು:ಜು.3:**ದೇವದುರ್ಗ ಪಟ್ಟಣದಲ್ಲಿ ಕಟ್ಟಡದ ಮೇಲ್ಛಾವಣಿ ಕುಸಿದು ಮೂವರು ಯುವಕರು ಮೃತಪಟ್ಟ ದುರಂತ ಸ್ಥಳಕ್ಕೆ ಸಂಸದ ಜಿ. ಕುಮಾರ ನಾಯಕ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಘಟನಾ ಸ್ಥಳದಲ್ಲಿ ಅಧಿಕಾರಿಗಳಿಂದ ಸಂಪೂರ್ಣ ಮಾಹಿತಿ ಪಡೆದ ಅವರು, ದುರಂತಕ್ಕೆ ಕಾರಣವಾದ ಅಂಶಗಳ ಕುರಿತು ಸವಿಸ್ತಾರವಾಗಿ ವಿಚಾರಣೆ ನಡೆಸಿದರು. ಮೃತರ ಕುಟುಂಬಗಳಿಗೆ ಸಂತಾಪ ಸೂಚಿಸಿದ ಸಂಸದರು, ಸರ್ಕಾರದಿಂದ ಸೂಕ್ತ ಪರಿಹಾರ ದೊರಕುವಂತೆ ಮುಖ್ಯಮಂತ್ರಿ ಅವರೊಂದಿಗೆ ವೈಯಕ್ತಿಕವಾಗಿ ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ದುರಂತಕ್ಕೆ ಕಾರಣವಾದ ಕಟ್ಟಡದ ಮಾಲೀಕರು ಹಾಗೂ ಸಂಬಂಧಪಟ್ಟವರ ವಿರುದ್ಧ ಕಾನೂನುಬದ್ಧವಾಗಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದ ಅವರು, ಘಟನೆಯ ಕುರಿತು ಸಮಗ್ರ ತನಿಖೆ ನಡೆಸಿ, ನಿರ್ಲಕ್ಷ್ಯ ಕಂಡುಬಂದರೆ ತಪ್ಪಿತಸ್ಥರ ವಿರುದ್ಧ ಯಾವುದೇ ಮುಲಾಜಿಲ್ಲದೆ ಕ್ರಮ ಜರುಗಿಸಬೇಕು ಎಂದು ನಿರ್ದೇಶನ ನೀಡಿದರು.ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಪಟ್ಟಣದಲ್ಲಿರುವ ಶಿಥಿಲಾವಸ್ಥೆಯ ಕಟ್ಟಡಗಳ ಸಮೀಕ್ಷೆ ನಡೆಸಿ, ಸಾರ್ವಜನಿಕರ ಸುರಕ್ಷತೆಗಾಗಿ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ರಾಜಶೇಖರ್ ನಾಯಕ್, ರಾಮಣ್ಣ ಇರಬಗೇರಾ, ಶರಣಗೌಡ ಗೌರಂಪೇಟೆ, ಜಯಂತರಾವ್ ಪತಂಗೆ, ಆದನಗೌಡ ಬುಂಕಲದೊಡ್ಡಿ, ಶಿವರಾಜ ಗೆಜ್ಜೆಬಾವಿ, ತಹಶೀಲ್ದಾರ್ ನಾಗಮ್ಮ ಕಟ್ಟಿಮನಿ, ಪುರಸಭೆ ಪೌರಾಯುಕ್ತರು, ಪೊಲೀಸ್ ಇಲಾಖೆ ಸಿಬ್ಬಂದಿ, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626

## ದೇಶಪ್ರೇಮ ಬೆಳೆಸುವ ಭಾರತ ಸೇವಾದಳ : ಮಾರುತಿ

ಧೈರ್ಯದ ದಾರಿ

**ಮಾನವಿ, ಜು. 3:** ದೇಶಪ್ರೇಮ, ಶಿಸ್ತು, ಸೇವಾ ಮನೋಭಾವ ಹಾಗೂ ಭಾವೈಕ್ಯತೆಯನ್ನು ವಿದ್ಯಾರ್ಥಿಗಳು ಮತ್ತು ಯುವಜನರಲ್ಲಿ ಬೆಳೆಸುವಲ್ಲಿ ಭಾರತ್ ಸೇವಾದಳದ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ತಾಲೂಕು ಪ್ರಭಾರಿ ದೈಹಿಕ ಶಿಕ್ಷಣಾಧಿಕಾರಿ ಮಾರುತಿ ಹೇಳಿದರು.



ನಗರದ ಕನ್ಯಾ ಶಾಲೆಯ ಸಭಾಂಗಣದಲ್ಲಿ ಭಾರತ್ ಸೇವಾದಳ ರಾಯಚೂರು ಹಾಗೂ ಶಾಲಾ ಶಿಕ್ಷಣ ಇಲಾಖೆ ರಾಯಚೂರು ಇವರ ಆಶ್ರಯದಲ್ಲಿ ಭಾರತ್ ಸೇವಾದಳ ತರಬೇತಿ ಪಡೆದ ಶಿಕ್ಷಕರಿಗಾಗಿ ಹಮ್ಮಿಕೊಂಡಿದ್ದ ಒಂದು ದಿನದ ಪುನಶ್ಚೇತನ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಷ್ಟ್ರೀಯ ಹಬ್ಬಗಳ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಪಥಸಂಚಲನ, ರಾಷ್ಟ್ರಗೀತೆ ಹಾಗೂ ದೇಶಭಕ್ತಿ ಗೀತೆಗಳ ಅಭ್ಯಾಸವನ್ನು ನೀಡುವ ಮೂಲಕ ಸೇವಾದಳದ ಚಟುವಟಿಕೆಗಳನ್ನು ಶಾಲೆಗಳಲ್ಲಿ ಪರಿಣಾಮಕಾರಿಯಾಗಿ ನಡೆಸಬೇಕು ಎಂದು ಅವರು ತಿಳಿಸಿದರು.

ತಾಲೂಕು ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಅಧ್ಯಕ್ಷ ಮೌನೇಶ್ ಮಾತನಾಡಿ, ಭಾರತ್ ಸೇವಾದಳವು ಕಳೆದ 75 ವರ್ಷಗಳಿಂದ ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಯುವಜನರಿಗೆ ತರಬೇತಿ ನೀಡುತ್ತಾ ದೇಶಾಭಿಮಾನ ಮತ್ತು ರಾಷ್ಟ್ರೀಯ ಮೌಲ್ಯಗಳನ್ನು ಬೆಳೆಸುವ ಕಾರ್ಯವನ್ನು ನಿರಂತರವಾಗಿ ನಡೆಸುತ್ತಿದೆ. ತಾಲೂಕಿನಲ್ಲಿ ಸೇವಾದಳದ ಚಟುವಟಿಕೆಗಳನ್ನು ಇನ್ನಷ್ಟು ವಿಸ್ತರಿಸುವ ಅಗತ್ಯವಿದೆ ಎಂದು ಹೇಳಿದರು.

ಭಾರತ್ ಸೇವಾದಳ ತಾಲೂಕು ಸಂಘಟಕ ಬಸವರಾಜ್ ಮಾಡಗೇರಿ ಮಾತನಾಡಿ, ಸೇವಾದಳದ ಕಾರ್ಯಕ್ರಮಗಳು ದೈಹಿಕ ಶಿಕ್ಷಣಕ್ಕೆ ಪೂರಕವಾಗಿದ್ದು, ರಾಷ್ಟ್ರೀಯ ಹಬ್ಬಗಳು ಹಾಗೂ ರಾಷ್ಟ್ರ ನಾಯಕರ ಜಯಂತಿಗಳ ಸಂದರ್ಭದಲ್ಲಿ ಶಾಲೆಗಳಲ್ಲಿ ಸೇವಾದಳದ ಚಟುವಟಿಕೆಗಳನ್ನು ಕಡ್ಡಾಯವಾಗಿ ಆಯೋಜಿಸಬೇಕು ಎಂದು ತಿಳಿಸಿದರು.

ಭಾರತ್ ಸೇವಾದಳ ವಿಭಾಗ ಸಂಘಟಕ ವಿದ್ಯಾಸಾಗರ್ ಚಿಣಮಗೇರಿ ಅವರು ಪ್ರಸಕ್ತ ಸಾಲಿನ ಸೇವಾದಳದ ಕಾರ್ಯಕ್ರಮಗಳು ಹಾಗೂ ಸಂಘಟನೆಯ ವಿವಿಧ ಚಟುವಟಿಕೆಗಳ ಕುರಿತು ಸವಿಸ್ತಾರವಾಗಿ ಮಾಹಿತಿ ನೀಡಿದರು.



ಭಾರತ್ ಸೇವಾದಳ ತಾಲೂಕು ಕಾರ್ಯದರ್ಶಿ ಮಹಿಬೂಬ್ ಮದ್ಲಾಪುರ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಶ್ರೀಧರ ಗೌಡ ವಂದಿಸಿದರು.

ಕಾರ್ಯಕ್ರಮದಲ್ಲಿ ವಿವಿಧ ಶಾಲೆಗಳ ಭಾರತ್ ಸೇವಾದಳ ಶಾಖೆಗಳ ನವೀಕರಣ ಕಾರ್ಯವೂ ನೆರವೇರಿತು. ಶಿಕ್ಷಕರು ಹಾಗೂ ಸೇವಾದಳದ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ನೇತಾಜಿ ಪಿ.ಯು. ಕಾಲೇಜಿನಲ್ಲಿ ಸ್ವಾಗತ ಸಮಾರಂಭ

## "ಸತತ ಅಭ್ಯಾಸದಿಂದ ಉತ್ತಮ ಭವಿಷ್ಯ ರೂಪಿಸಿಕೊಳ್ಳಿ" ; ಹಂಪಯ್ಯ ನಾಯಕ



ಧೈರ್ಯದ ದಾರಿ

**ಮಾನ್ವಿ:** ವಿದ್ಯಾರ್ಥಿಗಳು ತಮ್ಮ ಗುರಿಯ ಬಗ್ಗೆ ಸ್ಪಷ್ಟತೆ ಹೊಂದಿ, ನಿರಂತರ ಅಭ್ಯಾಸ ಮತ್ತು ಶಿಸ್ತಿನ ಜೀವನವನ್ನು ರೂಢಿಸಿಕೊಳ್ಳಬೇಕು. ಸತತ ಪರಿಶ್ರಮವೇ ಯಶಸ್ಸಿನ ಮೂಲವಾಗಿದ್ದು, ಇಂದಿನ ಅಧ್ಯಯನವೇ ನಾಳಿನ ಉಜ್ವಲ ಭವಿಷ್ಯವನ್ನು ರೂಪಿಸುತ್ತದೆ ಎಂದು ಶಾಸಕ ಹಂಪಯ್ಯ ನಾಯಕ ಹೇಳಿದರು.

ಅವರು ಮಾನ್ವಿಯ ನೇತಾಜಿ ಪಿ.ಯು. ಕಾಲೇಜಿನಲ್ಲಿ ಪ್ರಥಮ ವರ್ಷದ ವಿಜ್ಞಾನ,ಕಲಾ ಮತ್ತು ವಾಣಿಜ್ಯ ವಿಭಾಗದ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಸ್ವಾಗತ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಉತ್ತಮ ವ್ಯಕ್ತಿತ್ವ, ನೈತಿಕ ಮೌಲ್ಯಗಳು ಮತ್ತು ಕೌಶಲ್ಯಗಳನ್ನು ಬೆಳೆಸಿಕೊಳ್ಳಬೇಕು. ಅವಕಾಶಗಳನ್ನು ಸದ್ಬಳಕೆ ಮಾಡಿಕೊಂಡು ಸಮಾಜಕ್ಕೆ ಆದರ್ಶ ನಾಗರಿಕರಾಗಬೇಕು ಎಂದು ಕರೆ ನೀಡಿದರು.ಪ್ರಾಸ್ತಾವಿಕ ವಾಗಿ ಮಾತನಾಡಿದ ಆಡಳಿತಾಧಿಕಾರಿ ಡಾ.ಕೆ.ವಿನಯಾ ಮಾತನಾಡಿ ಕಳೆದ ನಾಲ್ಕು ವರ್ಷದಿಂದ ಕಲಾ ಮತ್ತು ವಾಣಿಜ್ಯ ವಿಭಾಗದಲ್ಲಿ ಜಿಲ್ಲೆಯಲ್ಲೇ ಅತ್ಯಂತ ಉತ್ತಮ ಫಲಿತಾಂಶ ಕೊಟ್ಟಿದ್ದೇವೆ. ವಿಜ್ಞಾನ ವಿಭಾಗ ದಲ್ಲೂ ಇದೇ ಪರಂಪರೆ ಮುಂದುವರೆಸುತ್ತೇವೆ.ಇದಕ್ಕೆ ವಿದ್ಯಾರ್ಥಿ ಗಳ ,ಪಾಲಕರ ಸಹಕಾರ ಬೇಕು ಎಂದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಆಡಳಿತ ಮಂಡಳಿಯ ಕೆ.ವಿಜಯ ಲಕ್ಷ್ಮಿ, ಕೆ.ರಾಜಾ ರವಿವರ್ಮಾ, ಅನೀಸ್ ಫಾತಿಮಾ, ರಹಿಂ,ಬಸವರಾಜ, ಸೇರಿದಂತೆ ಎಲ್ಲಾ ಉಪನ್ಯಾಸಕರು, ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಪೋಷಕರು ಉಪಸ್ಥಿತರಿದ್ದರು. ಕೊನೆಯಲ್ಲಿ ವಿದ್ಯಾರ್ಥಿ ಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆದವು.

## ಅಗ್ನಿಶಾಮಕ ದಳದಿಂದ ಅಣುಕು ಪ್ರದರ್ಶನ

ಧೈರ್ಯದ ದಾರಿ

**ರಾಯಚೂರು ಜುಲೈ 03:** ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಜುಲೈ02ರಂದು ಅಗ್ನಿ ಮುಂಜಾಗ್ರತಾ ಕ್ರಮಗಳ ಬಗ್ಗೆ ಅರಿವು ಮೂಡಿಸಲು ಮಾಕ್‌ಡ್ರಿಲ್ ಪ್ರದರ್ಶನವನ್ನು ಹಮ್ಮಿಕೊಳ್ಳಲು ಸೂಚಿಸಿರುವುದರಿಂದ ಜಿಲ್ಲಾ ಅಗ್ನಿಶಾಮಕ ಅಧಿಕಾರಿ ರವೀಂದ್ರ ಎ ಘಾಟಗೆ ಹಾಗೂ ಅಗ್ನಿಶಾಮಕ ಠಾಣಾಧಿಕಾರಿ ರಾಜು ಅವರು ನೇತೃತ್ವದಲ್ಲಿ ರಾಯಚೂರಿನ ನವೋದಯ ಸೆಂಟ್ರಲ್ ಶಾಲೆಯ 500ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಹಾಗೂ 50 ಶಿಕ್ಷಕರಿಗೆ ಅಗ್ನಿ ಅನಾಹುತಗಳ ಬಗ್ಗೆ ಅಣುಕು ಪ್ರದರ್ಶನವನ್ನು ತೋರಿಸಿ ಹಾಗೂ ಜಾಗೃತಿ ಮೂಡಿಸಿ ಮತ್ತು ಮುನ್ನೆಚ್ಚರಿಕೆ ಕ್ರಮಗಳ ಕುರಿತು ಮಾಕ್‌ಡ್ರಿಲ್ ಹಮ್ಮಿಕೊಳ್ಳಲಾಯಿತು.

ಇದೇ ಸಂದರ್ಭದಲ್ಲಿ ಠಾಣೆಯ ಸಿಬ್ಬಂದಿಗಳು, ನವೋದಯ ಸೆಂಟ್ರಲ್ ಶಾಲೆಯ ಮುಖ್ಯಗುರು, ಶಿಕ್ಷಕರು, ವಿದ್ಯಾರ್ಥಿಗಳು ಇದ್ದರು.











## ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಪಠ್ಯಪುಸ್ತಕ ವಿತರಣಾ ಕಾರ್ಯಕ್ರಮ: ಮಾಜಿ ಸಚಿವ ಎನ್. ಬೋಸರಾಜು ಹಾಗೂ ಶಾಸಕ ಜಿ. ಹಂಪಯ್ಯ ನಾಯಕ್ ಅವರಿಂದ ಚಾಲನೆ








ಧೈರ್ಯದ ದಾರಿ

**ಸಿರವಾರ, ಜುಲೈ 3:** ಸ್ಥಳೀಯ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಇಂದು ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಯಾದ ಉಚಿತ ಪಠ್ಯಪುಸ್ತಕ ವಿತರಣಾ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಕರ್ನಾಟಕ ಸರ್ಕಾರದ ಮಾಜಿ ಸಚಿವರಾದ ಎನ್. ಬೋಸರಾಜು ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿ, ಕಾಲೇಜಿನ ಪ್ರಥಮ ಮತ್ತು ದ್ವಿತೀಯ ವರ್ಷದ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕಗಳನ್ನು ವಿತರಿಸಿದರು. ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ್ದ ಶಾಸಕರಾದ ಸನ್ಮಾನ್ಯ ಜಿ. ಹಂಪಯ್ಯ ನಾಯಕ್ (ಸೌಕಾರ್) ಅವರು ವಿದ್ಯಾರ್ಥಿಗಳನ್ನುದ್ದೇಶಿಸಿ ಮಾತನಾಡಿ, ಸರ್ಕಾರದ ಶೈಕ್ಷಣಿಕ ಯೋಜನೆಗಳ ಸದುಪಯೋಗ ಪಡೆದುಕೊಳ್ಳುವಂತೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಾಜಿ ಸಚಿವ ಎನ್. ಬೋಸರಾಜು ಅವರು, "ಶಿಕ್ಷಣವು ಪ್ರತಿಯೊಬ್ಬ ವಿದ್ಯಾರ್ಥಿಯ ಬದುಕನ್ನು ಬದಲಿಸುವ ಶಕ್ತಿಯಾಗಿದೆ. ವಿದ್ಯಾರ್ಥಿಗಳ ಕಲಿಕೆಗೆ ಯಾವುದೇ ಅಡಚಣೆಯಾಗದಂತೆ ಪಠ್ಯಪುಸ್ತಕಗಳನ್ನು ಒದಗಿಸಲು ಸರ್ಕಾರ ಬದ್ಧವಾಗಿದೆ. ವಿದ್ಯಾರ್ಥಿಗಳು ಈ ಅವಕಾಶವನ್ನು ಬಳಸಿಕೊಂಡು ಉನ್ನತ ಶಿಕ್ಷಣದತ್ತ ಮುನ್ನಡೆಯಬೇಕು" ಎಂದು ತಿಳಿಸಿದರು.

ಶಾಸಕ ಜಿ. ಹಂಪಯ್ಯ ನಾಯಕ್ ಅವರು ಮಾತನಾಡಿ, "ವಿದ್ಯಾರ್ಥಿಗಳು ಶ್ರದ್ಧೆಯಿಂದ ವಿದ್ಯಾಭ್ಯಾಸ ಮಾಡಿ, ಪೋಷಕರಿಗೆ ಮತ್ತು ಕಾಲೇಜಿಗೆ ಕೀರ್ತಿ ತರಬೇಕು. ರಾಜ್ಯ ಸರ್ಕಾರವು ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದ್ದು, ಕಾಲೇಜಿನ ಮೂಲಸೌಕರ್ಯಗಳ ಅಭಿವೃದ್ಧಿಗೂ ಪೂರಕ ಕ್ರಮ ಕೈಗೊಳ್ಳಲಾಗುವುದು" ಎಂದು ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಪಟ್ಟಣ ಪಂಚಾಯತ್ ಅಧ್ಯಕ್ಷರಾದ ಹಾಜಿ ಚೌದ್ರಿ, ಪಟ್ಟಣ ಪಂಚಾಯತ್ ಸದಸ್ಯರಾದ ಮೌಲಾಸಾಬ್,ಹಾಸೆನಲ್ಲಿ ಸಾಬ್.ಮಾರ್ಕಂಡಪ್ಪ, ಮಾಜಿ ತಾಲೂಕು ಪಂಚಾಯತ್ ಅಧ್ಯಕ್ಷರಾದ ದಾನನ ಗೌಡ, ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷರಾದ ಶಿವು ಚುಕ್ಕಿ, ಮಹಿಳಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ರೇಣುಕಾ ಹಾಗೂ ಕಾಲೇಜಿನ ಪ್ರಾಂಶುಪಾಲರು, ಉಪನ್ಯಾಸಕರು ಮತ್ತು ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಜುಲೈ 06ರಂದು ಡಾ.ಬಾಬು ಜಗಜೀವನ ರಾಮ್ ಪುಣ್ಯತಿಥಿ: ಮಾಲಾರ್ಪಣೆಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿರು ಭಾಗಿಯಾಗಲು ಮಾನವಿ

**ರಾಯಚೂರು ಜುಲೈ 03:** ಸಮಾಜ ಕಲ್ಯಾಣ ಇಲಾಖೆಯಿಂದ ಜುಲೈ 06ರಂದು ಹಸಿರು ಕಾಂತ್ರಿಯ ಹರಿಕಾರ ಡಾ.ಬಾಬು ಜಗಜೀವನ ರಾಮ್ ರವರ ಪುಣ್ಯತಿಥಿ ನಿಮಿತ್ಯ ಪೂಜಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಹಾಗೂ ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಕೋರಲಾಗಿದೆ.

ಅಂದು ಬೆಳಿಗ್ಗೆ 9ಗಂಟೆಗೆ ರಾಯಚೂರು ನಗರದ ಸ್ಟೇಷನ್ ವೃತ್ತದಲ್ಲಿರುವ ಡಾ.ಬಾಬು ಜಗಜೀವನ ರಾಮ್ ಅವರ ಪುತ್ಥಳಿಗೆ ಜಿಲ್ಲಾಧಿಕಾರಿಗಳು ಮಾಲಾರ್ಪಣೆ ಮಾಡಲಿದ್ದು, ಈ ಕಾರ್ಯಕ್ರಮಕ್ಕೆ ಸಾರ್ವಜನಿಕರು ಹಾಗೂ ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಂಗಾಮಿನ ಬೆಳೆಗಳಿಗೆ ಬಲದಂಡೆ ಮತ್ತು ಎಡದಂಡೆ ನಾಲೆಯಲ್ಲಿ ನೀರು ಹರಿಸಲು ಸಾಧ್ಯವಾಗುವುದಿಲ್ಲ

**ರಾಯಚೂರು ಜುಲೈ 03:** ತುಂಗಭದ್ರಾ ಜಲಾನಯನ ಪ್ರದೇಶ ವ್ಯಾಪ್ತಿಯಲ್ಲಿ ಪ್ರಸ್ತುತ ಮಳೆ ಕೊರತೆಯಿಂದಾಗಿ ತುಂಗಭದ್ರಾ ಜಲಾಶಯದಲ್ಲಿ ಸಾಕಷ್ಟು ಪ್ರಮಾಣದಲ್ಲಿ ನೀರು ಸಂಗ್ರಹವಾಗಿರುವುದಿಲ್ಲ. ಆದಕಾರಣ ಮುಂಗಾರು ಹಂಗಾಮಿನ ಬೆಳೆಗಳಿಗೆ ಬಲದಂಡೆ ಮತ್ತು ಎಡದಂಡೆ ನಾಲೆಯಲ್ಲಿ ನೀರು ಹರಿಸಲು ಸಾಧ್ಯವಾಗುವುದಿಲ್ಲವೆಂದು ಮತ್ತು ಜಲಾಶಯದಲ್ಲಿ ಸಂಗ್ರಹವಾಗಿರುವ ನೀರನ್ನು ಕುಡಿಯಲು ಮಾತ್ರ ಬಳಸಲು ಸರ್ಕಾರದ ಆದೇಶವಾಗಿರುವ ಹಿನ್ನಲೆಯಲ್ಲಿ ಅಚ್ಚುಕಟ್ಟು ಭಾಗದ ಎಲ್ಲಾ ರೈತರು ಇಲಾಖೆಯೊಂದಿಗೆ ಸಹಕರಿಸಬೇಕಾಗಿ ಈ ಮೂಲಕ ಕೋರಲಾಗಿದೆ. ಮುಂಬರುವ ದಿನಗಳಲ್ಲಿ ಸಾಕಷ್ಟು ಪ್ರಮಾಣದಲ್ಲಿ ಮಳೆಯಾಗಿ ಜಲಾಶಯ ಭರ್ತಿಯಾದಲ್ಲಿ ನೀರಾವರಿ ಸಲಹಾ ಸಮಿತಿ ಸಭೆ ಆಯೋಜಿಸಿ ಬೆಳೆಗಳಿಗೆ ನೀರು ಹರಿಸುವ ಕುರಿತು ತೀರ್ಮಾನ ಕೈಗೊಳ್ಳಲಾಗುವುದು ಎಂದು ತುಂಗಭದ್ರಾ ಯೋಜನಾ ವೃತ್ತ ಕಾರ್ಯದರ್ಶಿಗಳು ಹಾಗೂ ಮುನಿರಾಬಾದ್ ಹಾಗೂ ತುಂಗಭದ್ರಾ ಯೋಜನೆ ಮತ್ತು ವಿಜಯನಗರ ಕಾಲುವೆಗಳ ನೀರಾವರಿ ಸಲಹಾ ಸಮಿತಿ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಸ್ಐಆರ್ ಮನೆ ಮನೆಗೆ ತೆರಳುವುದು ಕಡ್ಡಾಯ

**ಬೆಂಗಳೂರು, ಜು.3:** ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್ಐಆರ್) ವೇಳೆ ಬಿಎಲ್ಒಗಳು ಮನೆಗಳಿಗೆ ಭೇಟಿ ನೀಡದೆ ಒಂದೇ ಸ್ಥಳದಲ್ಲಿ ಗಣತಿ ನಮೂನೆಗಳನ್ನು ವಿತರಿಸುತ್ತಿದ್ದಾರೆ ಎಂಬ ದೂರುಗಳು ಕೇಳಿಬಂದ ಹಿನ್ನೆಲೆಯಲ್ಲಿ ರಾಜ್ಯ ಮುಖ್ಯ ಚುನಾವಣಾಧಿಕಾರಿ ವಿ. ಅನ್ಬುಕುಮಾರ್ ಅವರು ಎಲ್ಲಾ ಜಿಲ್ಲಾ ಚುನಾವಣಾಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.



ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಗಳ ಪ್ರಕಾರ ಬಿಎಲ್ಒಗಳು ಕಡ್ಡಾಯವಾಗಿ ಮನೆ-ಮನೆಗೆ ಭೇಟಿ ನೀಡಿ ಗಣತಿ ನಮೂನೆಗಳನ್ನು ವಿತರಿಸಬೇಕು. ಕಚೇರಿಗಳಿಂದ ಅಥವಾ ಒಂದೇ ಸ್ಥಳದಲ್ಲಿ ನಮೂನೆಗಳನ್ನು ವಿತರಿಸುವುದು ನಿಯಮಬಾಹಿರವಾಗಿದ್ದು, ಇಂತಹ ಕ್ರಮಗಳಿಗೆ ಅವಕಾಶ ನೀಡಬಾರದು ಎಂದು ಸೂಚಿಸಲಾಗಿದೆ.

SIR ಪ್ರಕ್ರಿಯೆಯ ಎಲ್ಲಾ ಹಂತಗಳಲ್ಲೂ ಚುನಾವಣಾ ಆಯೋಗದ ನಿರ್ದೇಶನಗಳು ಮತ್ತು ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಜಿಲ್ಲಾ ಚುನಾವಣಾಧಿಕಾರಿಗಳಿಗೆ ತಿಳಿಸಲಾಗಿದೆ.


ಇದೇ ವೇಳೆ, ಗಣತಿ ನಮೂನೆಗಳನ್ನು ಭರ್ತಿ ಮಾಡಲು ಕಷ್ಟಪಡುವ ಮತದಾರರಿಗೆ ಅಗತ್ಯ ನೆರವು ಒದಗಿಸಲು ಮತದಾರರ ಸೌಲಭ್ಯ ಕೇಂದ್ರಗಳನ್ನು ಪರಿಣಾಮಕಾರಿಯಾಗಿ ಬಳಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯವು ಪಾರದರ್ಶಕ ಹಾಗೂ ನಿಯಮಾನುಸಾರ ನಡೆಯುವಂತೆ ಎಲ್ಲಾ ಬಿಎಲ್ಒಗಳು ಕಾರ್ಯನಿರ್ವಹಿಸಬೇಕು ಎಂದು ಮುಖ್ಯ ಚುನಾವಣಾಧಿಕಾರಿ ಸ್ಪಷ್ಟಪಡಿಸಿದ್ದಾರೆ.

## ಜುಲೈ 6 ಕ್ಕೆ ಮಾನ್ವಿ ನಗರಕ್ಕೆ ಚೇತನ್ ಅಹಿಂಸಾ ಆಗಮನ

ಧೈರ್ಯದ ದಾರಿ

**ಮಾನ್ವಿ :** ಜುಲೈ 6 ರಂದು ಮಾನ್ವಿ ನಗರಕ್ಕೆ ಚಲನಚಿತ್ರ ನಟರು, ಸಾಮಾಜಿಕ ಚಿಂತಕರು ಮತ್ತು ಹೋರಾಟಗಾರರಾದ ಚೇತನ್ ಅಹಿಂಸಾ ರವರು ರಾಜಕೀಯ ಮುನ್ನೋಟ ಕಾರ್ಯಕ್ರಮದ ನಿಮಿತ್ಯ ಆಗಮಿಸಲಿದ್ದು ಸಮಾನ ಮನಸ್ಕರು ಎಲ್ಲರು ಕಾರ್ಯಕ್ರಮಕ್ಕೆ ಆಗಮಿಸಬೇಕೆಂದು ಹೋರಾಟಗಾರರು ಮತ್ತು ವಕೀಲರಾದ ಎಂ. ಮಲ್ಲೇಶ ಮಾಚನೂರು ಅವರು ಪತ್ರಿಕೆ ಪ್ರಕಟಣೆ ಮೂಲಕ ತಿಳಿಸಿದ್ದಾರೆ...




ದೇಶದಲ್ಲಿ ಈಗಿರುವ ಎಲ್ಲಾ ರಾಷ್ಟ್ರೀಯ ಹಾಗೂ ಪ್ರಾದೇಶಿಕ ಪಕ್ಷಗಳು ತಮ್ಮ ಸ್ವಂತ ಹಿತಾಸಕ್ತಿಗೆ ರಾಜಕೀಯ ಮಾಡುತ್ತಾ ಭ್ರಷ್ಟಾಚಾರದಲ್ಲಿ ಮುಳುಗಿ ಸಂವಿಧಾನದ ಆಶಯವನ್ನು ಮರೆತಿವೆ ಎಂದು ಎಂ. ಮಲ್ಲೇಶ ಮಾಚನೂರು ದೂರಿದರು.ಪತ್ರಿಕೆ ಪ್ರಕಟಣೆ ಮೂಲಕ ಮಾತನಾಡಿ, ಕರ್ನಾಟಕದಲ್ಲಿ ಆಡಳಿತ ನಡೆಸಿದ ಯಾವುದೇ ರಾಜಕೀಯ ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಒತ್ತು ನೀಡದೆ ಬರೀ ಬೆಂಗಳೂರಿಗೆ ಒತ್ತು ನೀಡಿ ಈ ಭಾಗದ ಜನರಿಗೆ, ಯುವಕರಿಗೆ ಅನ್ಯಾಯ ಮಾಡುತ್ತಾ ಬಂದಿವೆ.

ಜನರು ಇದರಿಂದ ರೋಸಿ ಹೋಗಿದ್ದಾರೆ. ಅದಕ್ಕಾಗಿ ರಾಜ್ಯದ ಎಲ್ಲ 224 ಕ್ಷೇತ್ರದಲ್ಲಿ ಓಡಾಡಿ ಸಂವಿಧಾನದ ಆಶಯ ಎತ್ತಿ ಹಿಡಿಯುವ, ದಲಿತ ಸಂಘ ಬಹುಜನ ಸಂಘ, ಕಾರ್ಮಿಕ ಸಂಘ, ಭ್ರಷ್ಟಾಚಾರ ವಿರೋಧಿ ಸಂಘ, ಪರಿಸರವಾದಿ ಸಂಘ, ರೈತ ಸಂಘ, ಮಹಿಳಾ ಸಂಘ ಎಲ್ಲರ ಜೊತೆಗೆ ಕರ್ನಾಟಕದಲ್ಲಿ ಸಮ ಸಮಾಜ ನಿರ್ಮಾಣ ಮಾಡಿ ಬರುವ ಚುನಾವಣೆಯಲ್ಲಿ ಸಂವಿಧಾನದ ಶಕ್ತಿ ಕಟ್ಟಲಾಗುವುದು ಮತ್ತು ಈ ವ್ಯವಸ್ಥೆಯನ್ನು ಸುಧಾರಿಸುವ ಸಲುವಾಗಿ ಚಲನಚಿತ್ರ ನಟರು, ಸಾಮಾಜಿಕ ಚಿಂತಕರು ಮತ್ತು ಹೋರಾಟಗಾರರಾದ ಚೇತನ್ ಅಹಿಂಸಾ ರವರು ಕರ್ನಾಟಕ ರಾಜ್ಯ ರಾಜಕಾರಣವನ್ನು ಪ್ರವೇಶ ಮಾಡುವುದರ ಜೊತೆಗೆ ಯುವ ಸಮೂಹವನ್ನು ಜಾಗೃತಿ ಮೂಡಿಸಿ ವಿಧಾನಸೌಧ ದಲ್ಲಿ ಕೂರಿಸಲು ಅವಿರತ ಪರಿಶ್ರಮ ಪಡುತ್ತಿದ್ದು ಹೀಗಾಗಿ ಚರ್ಚಿಸಲು ಚೇತನ್ ಅಹಿಂಸಾ ಆಗಮಿಸುತ್ತಿದ್ದಾರೆ ಹೀಗಾಗಿ ಸಮಾನ ಮನಸ್ಕರು, ರೈತರು, ಕೂಲಿ ಕಾರ್ಮಿಕರು, ಹಿಂದುಳಿದ ವರ್ಗದವರು, ದಲಿತರು ಮತ್ತು ಶೋಷಿತರು ಈ ರಾಜಕೀಯ ಮುನ್ನೋಟ ಚಿಂತನ ಮಂತನ ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ವಕೀಲರಾದ ಎಂ. ಮಲ್ಲೇಶ ಮಾಚನೂರು ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ..

# ಜುಲೈ 01ರಿಂದ ವಿಬಿ-ಜಿ ರಾಮಜಿ ಜಾರಿ ಗ್ರಾಮೀಣ ಭಾಗದ ಅಭಿವೃದ್ಧಿಗೆ ಮೊದಲ ಆದ್ಯತೆ: ಜಿ.ಪಂ ಸಿಇಓ ಈಶ್ವರ ಕುಮಾರ್

ಧೈರ್ಯದ ದಾರಿ



**ರಾಯಚೂರು ಜುಲೈ 03:** ಕೇಂದ್ರ ಸರ್ಕಾರದ ಪುರಸ್ಕೃತ ಹೊಸ ಯೋಜನೆ ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜಗಾರ್ ಅಂಡ್ ಅಜೀವಿಕ ಮಿಷನ್ ಜುಲೈ 01ರಿಂದ ಜಾರಿಗೆ ಬಂದಿದ್ದು, ಜಿಲ್ಲೆಯಲ್ಲಿಯೂ ಯೋಜನೆಯ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಬೇಕಾದ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದ್ದು, ಜಿಲ್ಲೆಯ ಗ್ರಾಮೀಣ ಭಾಗದ ಅಭಿವೃದ್ಧಿಗೆ ಮೊದಲ ಆದ್ಯತೆ ನೀಡಲಾಗುವುದು ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ತಿಳಿಸಿದ್ದಾರೆ.

ಅರ್ಹ ಗ್ರಾಮೀಣ ಕುಟುಂಬಕ್ಕೆ ಇನ್ನುಂದೆ 100 ದಿನಗಳ ಬದಲಾಗಿ 125 ಮಾನವ ದಿನಗಳ ಕಡ್ಡಾಯ ಉದ್ಯೋಗ ಕಲ್ಪಿಸುವ ಜೊತೆಗೆ ಗ್ರಾಮೀಣ ಪ್ರದೇಶದ ಸಮಗ್ರ ಮತ್ತು ಸ್ಯಾಚುರೇಷನ್ ಆಧಾರಿತ ಅಭಿವೃದ್ಧಿಗೆ ಆದ್ಯತೆ ನೀಡಲಾಗುವುದು.

ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಜಿಲ್ಲೆಯ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು (ಗ್ರಾಉ), ಅನುಷ್ಠಾನ ಇಲಾಖೆಗಳ ಅಧಿಕಾರಿಗಳು, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ತಾಂತ್ರಿಕ ಸಿಬ್ಬಂದಿ ಸೇರಿದಂತೆ ಎಲ್ಲ ಹಂತದ ಅಧಿಕಾರಿ ಸಿಬ್ಬಂದಿಗಳಿಗೆ ಈಗಾಗಲೇ ಮಾಸ್ಟರ್ ಟ್ರೇನರ್ ಗಳಿಂದ ತರಬೇತಿಯನ್ನು ನೀಡಲಾಗಿದೆ.

ಹೊಸ ಯೋಜನೆಯಡಿ ಗ್ಯಾರಂಟಿ ಕಾರ್ಡ್ ನೀಡುವವರಿಗೆ ಮನರೇಗಾ ಯೋಜನೆಯಡಿ ನೀಡಲಾಗಿದ್ದ ಉದ್ಯೋಗ ಚೀಟಿಗಳನ್ನೇ ಮಾನ್ಯ ಮಾಡಿ, ಆಸಕ್ತರಿಗೆ ಕೆಲಸ ಒದಗಿಸಲು ಅವಕಾಶ ಕಲ್ಪಿಸಲಾಗಿದೆ. ಜೂನ್ 30ರ ವರೆಗೆ ಮನರೇಗಾ ಯೋಜನೆಯಡಿ ಪ್ರಗತಿಯಲ್ಲಿದ್ದ ಕಾಮಗಾರಿಗಳಲ್ಲಿ ವಿಬಿ-ಜಿ ರಾಮ್-ಜಿ ಯೋಜನೆ ನಿಯಮಕ್ಕೆ ಒಳಪಟ್ಟ ಕಾಮಗಾರಿಗಳನ್ನು ತಡೆರಹಿತವಾಗಿ ಮುಂದುವರೆಸಲು ಅವಕಾಶವಿದ್ದು, ಯೋಜನೆ ಬದಲಾಗುತ್ತಿರುವ ಕಾರಣಕ್ಕಾಗಿ ಯಾವೊಬ್ಬ ಕೂಲಿಕಾರರು ಒಂದು ದಿನವೂ ಉದ್ಯೋಗ ಅವಕಾಶದಿಂದ ವಂಚಿತರಾಗುವ ಪ್ರಮೇಯ ಎದುರಾಗುವುದಿಲ್ಲ. ಗ್ರಾಮೀಣಾಭಿವೃದ್ಧಿ ಮಂತ್ರಾಲಯದ ಮಾರ್ಗ ಸೂಚಿಯಂತೆ ನೊಂದಾಯಿತ ಎಲ್ಲ ಕೂಲಿಕಾರರ ಇ-ಕೆವೈಸಿ ಕಡ್ಡಾಯವಾಗಿರುವುದರಿಂದ ಬಾಕಿ ಉಳಿದಿರುವ ಕೂಲಿಕಾರರ ಇ-ಕೆವೈಸಿ ಪ್ರಕ್ರಿಯೆ ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಸೂಚನೆ ನೀಡಲಾಗಿದೆ.

ಹೊಸ ಕಾಯಿದೆಯಡಿ ನಿಯಮಾನುಸಾರ ಎಲ್ಲ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಯೋಜನೆ ಜಾರಿಗೆ ತರಲು ಸೂಚನೆ ನೀಡಲಾಗಿದ್ದು, ಗ್ರಾಮೀಣ ಭಾಗದ ಎಲ್ಲ ಕೂಲಿಕಾರರು ಕೆಲಸ ಅರಸಿ ದೂರದ ಪಟ್ಟಣಗಳಿಗೆ ವಲಸೆ ಹೋಗದೆ ಸ್ವಂತ ಊರಿನಲ್ಲಿಯೇ ಹೊಸ ಯೋಜನೆಯಡಿ ಕೂಲಿ ಕೆಲಸ ಮತ್ತು ಜೀವನೋಪಾಯ ಸೌಲಭ್ಯ ಪಡೆದುಕೊಳ್ಳಬೇಕು. ಆ ಮೂಲಕ ಸರ್ಕಾರದಿಂದ ಜಾರಿಗೆ ತರಲಾದ ಜನಪರ ಯೋಜನೆಯ ಶತ ಪ್ರತಿಶತ ಸದುಪಯೋಗವನ್ನು ಸಾರ್ವಜನಿಕರು ಪಡೆಯಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ದಿನಗೂಲಿ 370 ರೂ. ನಿಂದ 382ಕ್ಕೆ ಏರಿಕೆ ವಿಬಿ-ಜಿ ರಾಮ್-ಜಿ ಯೋಜನೆಯಡಿ ದಿನಗೂಲಿಯನ್ನು 370 ರೂ. ನಿಂದ 382 ರೂ. ಏರಿಕೆ ಮಾಡಿ ಆದೇಶ ಹೊರಡಿಸಿದ್ದು, ಪುರುಷ ಮತ್ತು ಮಹಿಳೆಯರಿಗೆ ಸಮಾನ ಕೂಲಿ ಮುಂದುವರೆಯಲಿದೆ. ಕೂಲಿ ಹಣವನ್ನು ಗರಿಷ್ಠ 15 ದಿನಗಳ ಒಳಗಾಗಿ ಕೂಲಿಕಾರರ ಬ್ಯಾಂಕ್ ಖಾತೆಗಳಿಗೆ ಕಡ್ಡಾಯವಾಗಿ ಜಮೆ ಮಾಡಬೇಕು. ವಿಳಂಬವಾದರೆ ದಂಡದ ರೂಪದಲ್ಲಿ ಪರಿಹಾರ ನೀಡಬೇಕಾಗುತ್ತದೆ.**

## ವಯೋನಿವೃತ್ತಿ ಹಾಗೂ ಪದೋನ್ನತಿ ಬೀಳ್ಕೋಡುಗೆ ಸಮಾರಂಭ

**ಅರಕೇರಾ :**ಗ್ರಾಮೀಣಾಭಿವೃದ್ಧಿಯ ಪಯಣದಲ್ಲಿ ಸುಮಾರು 22 ವರ್ಷಗಳ ಕಾಲ ತಮ್ಮನ್ನು ತಾವು ಸಮರ್ಪಿಸಿಕೊಂಡಿದ್ದರು. ಗ್ರಾಮ ಪಂಚಾಯತಿ ಮುಸ್ಟೂರುದಲ್ಲಿ ಬಿಲ್‌ಕಲ್ಟೇರ್ ಸೇವೆಯಿಂದ ಪ್ರಾರಂಭವಾಗಿ ಅಭಿವೃದ್ಧಿ ಅಧಿಕಾರಿಗಳಾಗಿ ವೆಂಕೋಬನಾಯಕ ಅವರು ತಮ್ಮ ಸೇವೆಯನ್ನು ಸಲ್ಲಿಸಿ. ಇತ್ತಿಚಿಗೆ ತಮ್ಮ ಸುದೀರ್ಘ ಸೇವೆಯಿಂದ ವಯೋನಿವೃತ್ತಿ ಹೊಂದಿದ್ದರು.

ವೃತ್ತಿಜೀವನದುದ್ದಕ್ಕೂ ಪ್ರಾಮಾಣ ಕತೆ,ದಕ್ಷತೆ ಮತು ಜನಪರ ಕಾಳಜಿ ಹೆಸರಾಗಿದ್ದರು.ಗ್ರಾಮ ಪಂಚಾಯತಿಗಳ ಕಾರ್ಯವೈಖರಿಯನ್ನು ಸುದಾರಿಸುವಲ್ಲಿ ಸರಕಾರದ ಯೋಜನೆಗಳನ್ನು ಜನಸಾಮಾನ್ಯರಿಗೆ ತಲುಪಿಸುವಲ್ಲಿ ಮತ್ತು ಸ್ಥಳಿಯ ಆಡಳಿತವನ್ನು ಬಲಪಡಿಸುವಲ್ಲಿ ಅವರ ಪಾತ್ರ ಅನ್ಯನ. ಅವರು ಕಾರ್ಯನಿರ್ವಹಿಸಿದ ಪ್ರತಿಯೊಂದು ಗ್ರಾಮ ಪಂಚಾಯತಿಯಲ್ಲು ಅವರ ದೂರ ದೃಷ್ಟಿ ಮತ್ತು ಕ್ರಿಯಾಶೀಲತೆಯು ಹೊಸ ಬದಲಾವಣೆಗಳಿಗೆ ಹೆಚ್ಚಿನ ಪ್ರಾಮುಖ್ಯತೆ ನೀಡುತ್ತಿದ್ದರು ಎಂದು ಬಿಜೆಪಿ ಹಿರಿಯ ಮುಖಂಡರಾದ ಕೆ,ಅನಂತರಾಜನಾಯಕರವರು ಹೇಳಿದರು.

ಅವರು ಅರಕೇರಾ ಗ್ರಾಮಪಂಚಾಯತ ಅವರಣದಲ್ಲಿ ಹಮ್ಮಿಕೊಂಡಿದ್ದ ವಯೋನಿವೃತ್ತಿ ವೆಂಕೋಬನಾಯಕ ಹಾಗೂ ಪದೋನ್ನತಿ ಯಮನಪ್ಪ ಕಾರ್ಯದರ್ಶಿ ಇವರುಗಳಿಗೆ ಬೀಳ್ಕೊಡುಗೆ ವೆಂಕೋಬನಾಯಕರವರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ಅವರ ಸೇವಾವಧಿಯಲ್ಲಿ ಅನೇಕ ಸವಾಲುಗಳನ್ನು ಎದುರಿಸಿದರೂ ಅವುಗಳನ್ನು ಸಮರ್ಥವಾಗಿ ನಿಭಾಹಿಸಿ,ಗ್ರಾಮಗಳ ಅಭಿವೃದ್ಧಿಗೆ ಅಡೆತಡೆಗಳಾಗದಂತೆ ನೊಡಿಕೊಂಡರು.ಸ್ಥಳಿಯ ಜನಪ್ರತಿನೀಧಿಗಳು ಗ್ರಾಮಸ್ಥರು ಮತ್ತು ಸಹೋದ್ಯೋಗಿಗಳೊಂದಿಗೆ ಉತ್ತಮ ಬಾಂಧವ್ಯವನ್ನು ಹೊಂದಿದ್ದಅವರು ಪ್ರತಿಯೊಬ್ಬರ ಅಭಿಪ್ರಾಯಗಳಿಗೂ ಮನ್ನಣೆ ನೀಡಿ ಸಾಮೂಹಿಕ ನಿರ್ಧಾಗಳಿಗೆ ಒತ್ತು ನೀಡಿತ್ತಿದ್ದರು,ಅವರ ಸರಳ ವ್ಯಕ್ತಿತ್ವ ಸದಾ ನಗುಮುಖಿ ಮತ್ತು ಸಮಸ್ಯೆಗಳನ್ನು ಅಲಿಸುವ ತಾಳ್ಮೆ ಎಲ್ಲರ ಮೆಚ್ಚುಗೆಗೆ ಪಾತ್ರವಾಗಿತ್ತು.

ಅಥಿತಿಗಳಾಗಿ ಶ್ರಿದೇವಿ ಆರ್ ನಾಯಕ ರಾಷ್ಟ್ರೀಯ ಮಹಿಳಾ ಕಾಂಗ್ರೆಸ್ ಕಾರ್ಯದರ್ಶಿ ಮಾತನಾಡಿ ಸರಕಾರಿ ಅಧಿಕಾರಿಗಳಾಗಿ ನೀವು ನಿವೃತ್ತಿಯಾಗಿರಬಹುದು ನಿಮ್ಮ ಮನಸ್ಸಿನಲ್ಲಿ ಜನಗಳ ಸೇವೆ ಮಾಡೋದಕ್ಕೆ ನೀವು ಯಾವತ್ತೂ ನಿವೃತ್ತಿಯಾಗಿಲ್ಲ ಅಂತ ಈ ಸಂದರ್ಭದಲ್ಲಿ ಹೇಳಕ್ಕೆ ಇಷ್ಟ ಪಡ್ತೀನಿ ಹಾಗಾಗಿ ಮುಂದಿನ ದನಮಾನಗಳಲ್ಲಿ ನೀವು ಕೂಡಾ ಏನಾದರು ಸಮಾಜಸೇವೆ ಮಾಡುವಂತಹ ಕೆಲಸ ಮಾಡ್ರಿ ಅಂತ ಹೇಳಿದರು. ನಿಮ್ಮ ನಿವೃತ್ತಿ ಝೀವನ ಒಳ್ಳೆಯದಾಗಿರಲಿ,ಆರೋಗ್ಯ ಕೂಡಾ ಚೆನ್ನಾಗಿರಲಿ ಎಂದರು.



ಸನ್ಮಾನ ಸ್ವೀಕರಿಸಿ ಮಾತನಾಡಿ ವೆಂಕೋಬನಾಯಕ ತಮ್ಮ ಜೀವನದುದ್ದುಕ್ಕೂ ಸಮಾಜಕ್ಕೆ ಸೇವೆ ಸಲ್ಲಿಸಲು ಸಿಕ್ಕ ಅವಕಾಶಕ್ಕೆ ಕೃತಜ್ಞತೆಸಲ್ಲಿಸಿದರು. ಮತ್ತು ನಿವೃತ್ತಿಯ ನಂತರವೂ ಸಮಾಜ ಸೇವಾ ಕಾರ್ಯಗಳಿಗೆ ಸಕ್ರಿಯವಾಗಿ ತೋಡಗಿಸಿಕೊಳ್ಳುವ ಇಚ್ಚೆಯನ್ನು ವ್ಯಕ್ತಪಡಿಸಿದರು.ತಮ್ಮ ವೃತ್ತಿ ಜೀವನದ ಆರಂಭದಿಂದ ಇಂದಿನವರೆಗಿನ ಪಯಣವನ್ನು ಮೆಲುಕು ಹಾಕಿದರು.ನನ್ನ ವೃತ್ತಿ ಜೀವನದಲ್ಲಿ ಅನೇಕ ಸವಾಲುಗಳನ್ನು ಎದುರಿಸಿದ್ದೇನೆ. ತಮ್ಮ ಯಶಸ್ಸಿಗೆ ಕಾರಣರಾದ ಗ್ರಾಮದ ಮುಖಂಡರು ಪಂಚಾಯತಿಯ ಎಲ್ಲಾ ಸಿಬ್ಬಂದಿಗಳಿಗೂ ಗ್ರಾಮಸ್ಥರಿಗೂಎಲ್ಲರಿಗೂ ಕೃತತ್ಞತೆಸಲ್ಲಿಸಿದರು.

ಡಾ.ಎಚ್ ಎ.ನಾಡಗೌಡ,ಕಾಂಗ್ರೆಸ್ ಪಕ್ಷದ ಪರಿಶಿಷ್ಟ ಪಂಗಡ ವಿಭಾಗದ ಅಧ್ಯಕ್ಷರಾದ ಬಸವರಾಜಪೂಜಾರಿ, ವೆಂಕಟೇಶನಾಯಕದೊರೆ, ಚನ್ನವೀರಯ್ಯಸ್ವಾಮಿ ಹಿರೇಮಠ ಮಾತನಾಡಿದರು.

ವೇದಿಕೆ ಮೇಲೆ ಸತ್ಯನಾರಾಯಣನಾಯಕ ಪೋಲಿಸ್ ಪಾಟೀಲ್, ಸೀತಣ್ಣನಾಯಕ ಗುರಿಕಾರ,ಜಿ.ಬೂದೆಪ್ಪಸಾಹುಕಾರ, ಮಲ್ಲಿಕಾರ್ಜುನ 'ಸಾಹುಕಾರ ಗುಡಿ, ಜಾವಿದ್ ಆರ್ ಚಂಚೋಳಿಕರ್ ಮುಂತಾದವರು ಉಪಸ್ಥಿತರಿದ್ದರು

# ಅಭಿವೃದ್ಧಿ ಕಾಮಗಾರಿಗೆ ಜನರ ಸಹಕಾರ ಅಗತ್ಯ: ಅಲ್ಲಮಪ್ರಭು



**ಕಲಬುರಗಿ:ಜು.3:**ಸರ್ಕಾರದ ಅನುದಾನದಿಂದ ಕೈಗೆತ್ತಿಕೊಳ್ಳುವ ಅಭಿವೃದ್ಧಿ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಬೇಕು. ಗುತ್ತಿಗೆದಾರರು ಜವಾಬ್ದಾರಿಯಿಂದ ಕೆಲಸ ನಿರ್ವಹಿಸಬೇಕು. ಸಾರ್ವಜನಿಕರು ಕೂಡ ಕಾಮಗಾರಿಗೆ ಅಡಚಣೆ ಉಂಟುಮಾಡದೆ, ಗುಣಮಟ್ಟದ ಕೆಲಸ ಆಗುವಂತೆ ಮೇಲ್ವಿಚಾರಣೆ ವಹಿಸಬೇಕು ಎಂದು ಶಾಸಕ ಅಲ್ಲಮಪ್ರಭು ಪಾಟೀಲ್ ಹೇಳಿದರು.

ನಗರದ ಸಂತೋಷ ಕಾಲೋನಿಯಲ್ಲಿ ಸಿಎಂಐಡಿಪಿ ಯೋಜನೆಯಡಿ 50 ಲಕ್ಷ ವೆಚ್ಚದ ಸಿಸಿ ರಸ್ತೆ ಮತ್ತು ಒಳಚರಂಡಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ಕಾಮಗಾರಿ ಕಳಪೆಯಾಗಿದೆಯೆಂದು ಜನರು ದೂರು ನೀಡುವಂತಹ ಪರಿಸ್ಥಿತಿ ನಿರ್ಮಾಣವಾಗಬಾರದು. ಅಭಿವೃದ್ಧಿ ಕಾರ್ಯಗಳು ಯಶಸ್ವಿಯಾಗಲು ಜನಪ್ರತಿನಿಧಿಗಳು, ಅಧಿಕಾರಿಗಳು, ಗುತ್ತಿಗೆದಾರರು ಹಾಗೂ ಸಾರ್ವಜನಿಕರ ಸಹಕಾರ ಅತ್ಯಗತ್ಯ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಅಕ್ಕಮಹಾದೇವಿ ಮಹಿಳಾ ಸಂಘದ 'ಅಕ್ಕನ ಬಳಗ'ದ ಸದಸ್ಯೆಯರು, ತಮ್ಮ ಸಂಘದ ಹೆಸರಿನಲ್ಲಿರುವ ನಿವೇಶನದಲ್ಲಿ ದೇವಸ್ಥಾನ ನಿರ್ಮಾಣಕ್ಕೆ ಅನುದಾನ ಮಂಜೂರು ಮಾಡುವಂತೆ ಮನವಿ ಸಲ್ಲಿಸಿದರು. ಇದಕ್ಕೆ ಸ್ಪಂದಿಸಿದ ಶಾಸಕ ಅಲ್ಲಮಪ್ರಭು ಪಾಟೀಲ್, ಶೀಘ್ರದಲ್ಲೇ ಅಗತ್ಯ ಅನುದಾನ ಒದಗಿಸಲು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಮಾಜಿ ಪಾಲಿಕೆ ಸದಸ್ಯ ಶಂಕರಸಿಂಗ್, ರಾಜಶೇಖರ ಮುನ್ನೋಳಿ, ವಾಸುದೇವ ಪಾಟೀಲ್, ಮಾಣಿಕರಾವ್ ದಣ್ಣೂರ, ಶ್ರೀಶೈಲ್ ಮೂಲಗೆ, ಮಂಜುನಾಥ್ ವಗ್ಗಿ .ಉಮೇಶ್ ಹತ್ತಿ .ಸುಧಾಕರ ಜಗದಾಳೆ, ಸೌದಾಗರ, ಶಂಕರ, ಬಸವರಾಜ ಕಣ್ಣೂರ, ಸುಭಾಷ ಕಣ್ಣಿ, ಪವನ ಕಣ್ಣೂರ, ಸಹದೇವ ದೊಡ್ಮನಿ ನಂದೂರ, ಕಿರಿಯ ಅಭಿಯಂತರ ಸಂದೀಪ ಪಾಟೀಲ್ ಹಾಗೂ ಬಡಾವಣೆ ನಿವಾಸಿಗಳು ಉಪಸ್ಥಿತರಿದ್ದರು.

# ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ನಿಮಿತ್ಯ ಜಾಗೃತಿ ಜಾಥಾ



**ಕಮಲನಗರ:ಜು.3:**ತಾಲೂಕಿನ ಶಾಂತಿವರ್ಧಕ ಪದವಿ ಪೂರ್ವ ಕಾಲೇಜಿನಲ್ಲಿ ಗುರುವಾರ ಭಾರತ ಚುನಾವಣಾ ಆಯೋಗದ ಆದೇಶದಂತೆ "ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ–2026" ರ ಅಂಗವಾಗಿ ಹಮ್ಮಿಕೊಳ್ಳಲಾಗಿತ್ತು.

ಈ ಬೃಹತ್ ಸಾರ್ವಜನಿಕ ಜಾಗೃತಿ ಜಾಥಾ ಅತ್ಯಂತ ಯಶಸ್ವಿಯಾಗಿ ಜರುಗಿತು.

ಪ್ರಜಾಪ್ರಭುತ್ವದ ಅಡಿಪಾಯವಾಗಿರುವ ಮತದಾನದ ಹಕ್ಕನ್ನು ಪ್ರತಿಯೊಬ್ಬ ಅರ್ಹನಾಗರಿಕನೂ ಪಡೆದುಕೊಳ್ಳಬೇಕು ಮತ್ತು ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಹಾಗೂ ತಿದ್ದುಪಡಿಗಳ ಕುರಿತು ಜನಸಾಮಾನ್ಯರಲ್ಲಿ ಅರಿವು ಮೂಡಿಸುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿತ್ತು. ಅಚಿಟಠಿಚುರಿಟಿ& ಇಟಜಟಿಣುರಿಟಿ

ಈ ಮಹತ್ವದ ಜಾಗೃತಿ ಜಾಥಾಕ್ಕೆ ಕಾಲೇಜಿನ ಪ್ರಾಂಶುಪಾಲರಾದ ಓಂಕಾಂತ ಸೂರ್ಯವಂಶಿ ಅವರು ಚಾಲನೆ ನೀಡಿದರು. ಈ ಬೃಹತ್ ಮೆರವಣಿಗೆಯು ಕಾಲೇಜು ಆವರಣದಿಂದ ಆರಂಭಗೊಂಡು, ಕಮಲನಗರ ಪಟ್ಟಣದ ಪ್ರಮುಖ ರಸ್ತೆ ಹಾಗೂ ಮುಖ್ಯ ವೃತ್ತಗಳ ಮೂಲಕ

ಸಾಗಿತು.

ವಿದ್ಯಾರ್ಥಿಗಳು ಮತ್ತು ಉಪನ್ಯಾಸಕರು ಜಾಗೃತಿ ಫಲಕಗಳನ್ನು ಪ್ರದರ್ಶಿಸುತ್ತಾ, ಮೆರವಣಿಗೆಯು ತಹಸಿಲ ಕಚೇರಿಗೆ ತಲುಪಿ ಮುಕ್ತಾಯಗೊಂಡಿತು. ಜಾಗೃತಿ ಅಭಿಯಾನದಲ್ಲಿ ಕಾಲೇಜಿನ ಹಿರಿಯ ಉಪನ್ಯಾಸಕರುಗಳಾದ ಶರಣಗೌಡ ಪಾಟೀಲ್, ಕಾಳಿದಾಸಬೌದ್ದೆ.ನಾಗನಾಥ್ ಕೊಳ್ಳ, ಶ್ರೀಕಾಂತ್ ಪ್ಯಾಗೆ, ಶಿವಶಂಕರ್ ಕಾಂಬ್ಳೆ, ವೆಂಕಟ್ ಮೋರೆ, ಸಿದ್ದಪ್ಪ

ಬಚಿಪಾಳ್ಳೆ, ಶಿವಶಂಕರ್ ವಾಡೇಕರ್, ಸುನಿಲ್ ಬಾರೊಳೆ, ಸುಭಾಷ್ ರಾಥೋಡ್, ಬಸವಂಬಿಕಾ ಚಿಮ್ಮಾ, ಅಶ್ವಿನಿ ಕಾಂಬಳೆ, ನಾಗನಾಥ್ ಬೆನಚಿಂಚೋಳಿ, ಯಲ್ಲಾಲಿಂಗ ಮೇತ್ರೆ ಜಗನಾಥ್ ಪಾಟೀಲ್, ಚಂದ್ರಕಾಂತ್ ಬೈರೆ. ವಿಜಯಲಕ್ಷ್ಮಿ ಶಾಪೂರೆ ಸೇರಿದಂತೆ ಕಾಲೇಜಿನ ಇತರೆ ಬೋಧಕ, ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ಕಾಲೇಜಿನ ವಿದ್ಯಾರ್ಥಿಗಳು ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ಸುದ್ದಿ ಮತ್ತು
ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ರಾಜ್ಯ ಸರ್ಕಾರ ಹಿಂಪಡೆದ ಗಂಭೀರ ಕ್ರಿಮಿನಲ್ ಪ್ರಕರಣಗಳಿಗೆ ಹೈಕೋರ್ಟ್ ತಡೆ: ಕಾನೂನಿನ ಗೆಲುವು: ಹರ್ಷಾ ಗುತ್ತೇದಾರ



**ಕಲಬುರಗಿ:ಜು.3:**ಇತ್ತೀಚೆಗೆ ರಾಜ್ಯ ಸರ್ಕಾರ ವಿವಿಧ ಗಂಭೀರ ಕ್ರಿಮಿನಲ್ ಪ್ರಕರಣಗಳನ್ನು ಹಿಂಪಡೆಯಲು ಕೈಗೊಂಡ ಕ್ರಮಕ್ಕೆ ರಾಜ್ಯ ಹೈಕೋರ್ಟ್ ತಡೆಯಾಜ್ಞೆ ನೀಡಿರುವುದು ಕಾನೂನಿನ ಆಳ್ವಿಕೆ ಹಾಗೂ ನ್ಯಾಯಾಂಗದ ಮೇಲಿನ ಜನರ ವಿಶ್ವಾಸವನ್ನು ಮತ್ತಷ್ಟು ಬಲಪಡಿಸಿದೆ ಎಂದು ಜಿ.ಪಂ ಮಾಜಿ ಉಪಾಧ್ಯಕ್ಷ ಹರ್ಷಾ ಗುತ್ತೇದಾರ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಆಳಂದ ಲಾಡ್ಲೇ ಮಶಾಕ್ ದರ್ಗಾದ ಪ್ರಕರಣದಲ್ಲಿ ಆರೋಪಿಗಳೆಲ್ಲರೂ ವೃತ್ತಿ ಮತ್ತು ಪ್ರವೃತ್ತಿಯಿಂದ ಗಂಭೀರವಾದ ಅಪರಾಧ ಪ್ರಕರಣಗಳಲ್ಲಿ ಭಾಗಿಯಾದವರಾಗಿದ್ದಾರೆ ಅವರ ಮೇಲೆ ಗಡಿಪಾರು ಆದೇಶವೂ ಆಗಿದೆ. ಇಂತಹ ನೀಚ ಮತ್ತು ಸಮಾಜದ್ರೋಹಿ ಕೆಲಸಗಳಲ್ಲಿ ತೊಡಗಿರುವವರಿಗೆ ಕಾನೂನು ತಕ್ಕ ಪಾಠ ಕಲಿಸಿದೆ. ಪ್ರಕರಣ ಹಿಂಪಡೆಯಲು ಶಿಫಾರಸ್ಸು ಮಾಡಿದ ಶಾಸಕ ಬಿ ಆರ್ ಪಾಟೀಲ, ಗೃಹ ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ಸಚಿವ ಯು ಟಿ ಖಾದರ್ ಅವರು ಈಗಲಾದರೂ ನ್ಯಾಯಾಂಗಕ್ಕೆ ಗೌರವ ಕೊಡಲಿ ಎಂದಿದ್ದಾರೆ.

ಅಪರಾಧ ಪ್ರಕರಣಗಳನ್ನು ರಾಜಕೀಯ ಅಥವಾ ಇತರ ಕಾರಣಗಳಿಗಾಗಿ ಹಿಂಪಡೆಯುವ ಯಾವುದೇ ಕ್ರಮವು ನ್ಯಾಯದ ಮೂಲ ತತ್ವಗಳಿಗೆ ವಿರುದ್ಧವಾಗಿದೆ. ಸಮಾಜದ ಶಾಂತಿ, ಕಾನೂನು ಸುವ್ಯವಸ್ಥೆ ಹಾಗೂ ಸಾರ್ವಜನಿಕ ಹಿತಾಸಕ್ತಿಗೆ ಸಂಬಂಧಿಸಿದ ಗಂಭೀರ ಪ್ರಕರಣಗಳಲ್ಲಿ ಸರ್ಕಾರವು ಅತ್ಯಂತ ಜವಾಬ್ದಾರಿಯಿಂದ ನಡೆದುಕೊಳ್ಳಬೇಕು. ಅಂತಹ ಪ್ರಕರಣಗಳನ್ನು ಏಕಪಕ್ಷೀಯವಾಗಿ ಹಿಂಪಡೆಯುವ ಪ್ರಯತ್ನದಿಂದ ಜನರಲ್ಲಿ ತಪ್ಪು ಸಂದೇಶ ರವಾನೆಯಾಗುವ ಅಪಾಯವಿದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

ರಾಜ್ಯ ಹೈಕೋರ್ಟ್ ನೀಡಿರುವ ತಡೆಯಾಜ್ಞೆ ನ್ಯಾಯದ ಪರವಾದ ಮಹತ್ವದ ಹೆಜ್ಜೆಯಾಗಿದ್ದು, ಯಾವುದೇ ಸರ್ಕಾರವು ಕಾನೂನಿನ ಚೌಕಟ್ಟಿನೊಳಗೆ ಕಾರ್ಯನಿರ್ವಹಿಸಬೇಕೆಂಬ ಸಂದೇಶವನ್ನು ಸ್ಪಷ್ಟವಾಗಿ ನೀಡಿದೆ. ನ್ಯಾಯಾಂಗದ ಈ ಮಧ್ಯಪ್ರವೇಶವನ್ನು ನಾನು ಸ್ವಾಗತಿಸುತ್ತೇನೆ ಎಂದು ಹೇಳಿದ್ದಾರೆ.

ರಾಜ್ಯ ಸರ್ಕಾರವು ನ್ಯಾಯಾಂಗದ ನಿರ್ದೇಶನವನ್ನು ಗೌರವಿಸಿ, ಗಂಭೀರ ಅಪರಾಧ ಪ್ರಕರಣಗಳನ್ನು ಹಿಂಪಡೆಯುವ ನಿರ್ಧಾರವನ್ನು ಮರುಪರಿಶೀಲಿಸಬೇಕು. ಅಪರಾಧಿಗಳಿಗೆ ರಕ್ಷಣೆ ನೀಡುವ ಭಾವನೆ ಮೂಡಿಸುವ ಯಾವುದೇ ಕ್ರಮದಿಂದ ದೂರವಿರಬೇಕು ಹಾಗೂ ಕಾನೂನಿನ ಮುಂದೆ ಎಲ್ಲರೂ ಸಮಾನರು ಎಂಬ ತತ್ವವನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ತಿಳಿಸಿದ್ದಾರೆ.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆಯನ್ನು ಕಾಪಾಡುವುದು ಸರ್ಕಾರದ ಮೊದಲ ಆದ್ಯತೆಯಾಗಬೇಕು. ಅಪರಾಧಿಗಳಿಗೆ ರಾಜಕೀಯ ಆಶ್ರಯ ನೀಡುವ ಬದಲು, ಸಂತ್ರಸ್ತರಿಗೆ ನ್ಯಾಯ ದೊರಕುವಂತೆ ಸರ್ಕಾರ ಕಾರ್ಯನಿರ್ವಹಿಸಬೇಕು. ಬಿಜೆಪಿ ಸದಾ ಕಾನೂನಿನ ಆಳ್ವಿಕೆ, ಪಾರದರ್ಶಕ ಆಡಳಿತ ಮತ್ತು ನ್ಯಾಯದ ಪರವಾಗಿ ನಿಲ್ಲಲಿದೆ ಎಂದು ಹೇಳಿದ್ದಾರೆ.

ಯಾವುದೇ ವ್ಯಕ್ತಿ ಅಥವಾ ಸಂಘಟನೆ ಕಾನೂನಿಗಿಂತ ಮೇಲಲ್ಲ. ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಮತ್ತು ಸಾರ್ವಜನಿಕ ಸುವ್ಯವಸ್ಥೆಗೆ ಧಕ್ಕೆ ಉಂಟುಮಾಡುವ ಕೃತ್ಯಗಳಲ್ಲಿ ತೊಡಗುವವರ ವಿರುದ್ಧ ಕಾನೂನು ತನ್ನ ಕರ್ತವ್ಯವನ್ನು ನಿರ್ವಹಿಸಿರುವುದು ಸ್ವಾಗತಾರ್ಹ ಬೆಳವಣಿಗೆಯಾಗಿದೆ.

ಧರ್ಮ, ಜಾತಿ ಅಥವಾ ರಾಜಕೀಯ ಭಿನ್ನಾಭಿಪ್ರಾಯದ ಹೆಸರಿನಲ್ಲಿ ಸಮಾಜದ ಸಾಮರಸ್ಯವನ್ನು ಹಾಳು ಮಾಡುವ ಪ್ರಯತ್ನಗಳಿಗೆ ಯಾವುದೇ ರೀತಿಯ ಅವಕಾಶ ನೀಡಬಾರದು. ನ್ಯಾಯಾಲಯವು ಲಭ್ಯವಿದ್ದ ಸಾಕ್ಷ್ಯಾಧಾರಗಳ ಆಧಾರದ ಮೇಲೆ ನೀಡಿರುವ ತೀರ್ಪು ನ್ಯಾಯ ವ್ಯವಸ್ಥೆಯ ಮೇಲಿನ ಜನರ ವಿಶ್ವಾಸವನ್ನು ಮತ್ತಷ್ಟು ಬಲಪಡಿಸಿದೆ ಎಂದು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ಎಲ್ಲರೂ ನ್ಯಾಯಾಂಗದ ತೀರ್ಪುಗಳನ್ನು ಗೌರವಿಸಬೇಕು. ಯಾವುದೇ ತೀರ್ಪನ್ನು ರಾಜಕೀಯ ಅಥವಾ ಧಾರ್ಮಿಕ ದೃಷ್ಟಿಕೋನದಿಂದ ನೋಡುವ ಬದಲು, ನ್ಯಾಯದ ದೃಷ್ಟಿಯಿಂದ ಸ್ವೀಕರಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಮತ್ತು ಪರಸ್ಪರ ವಿಶ್ವಾಸವನ್ನು ಉಳಿಸಿಕೊಳ್ಳಲು ಎಲ್ಲ ಸಮುದಾಯಗಳ ಜನರು ಸಹಕರಿಸಬೇಕು. ನ್ಯಾಯದ ಪರವಾಗಿ ಮತ್ತು ಕಾನೂನಿನ ಆಳ್ವಿಕೆಯ ಪರವಾಗಿ ಬಿಜೆಪಿ ಸದಾ ನಿಲ್ಲಲಿದೆ.

# ಗ್ರಾಮ ಪಂಚಾಯಿತಿಗಳಲ್ಲಿ ಭಷ್ಟಾಚಾರ ತನಿಖೆಗೆ ಒತ್ತಾಯ



**ಹುಮನಾಬಾದ್ :ಜು.3:** ತಾಲೂಕಿನ 19 ಗ್ರಾಮ ಪಂಚಾಯತ್‌ಗಳಲ್ಲಿ ಪರಿಶಿಷ್ಟ ಜಾತಿ(ಎಸ್‌ಸಿ) ಮತ್ತು ಪರಿಶಿಷ್ಟ ಪಂಗಡ (ಎಸ್‌ಟಿ) ಸಮುದಾಯಗಳ ಅಭಿವೃದ್ಧಿಗಾಗಿ ಮೀಸಲಿಟ್ಟ 15ನೇ ಹಣಕಾಸು ಯೋಜನೆಯ ಅನುದಾನದಲ್ಲಿ ಕೋಟ್ಯಂತರ ರೂಪಾಯಿ ದುರುಪಯೋಗ ಮತ್ತು ಭ್ರಷ್ಟಾಚಾರ ನಡೆದಿದೆ ಎಂದು ಭಾರತೀಯ ದಲಿತ ಪ್ಯಾಂಥರ್ ಅಧ್ಯಕ್ಷ ಗಣಪತಿ ಅಷ್ಟೂರೆ ಅವರು ನೇತೃತ್ವದಲ್ಲಿ ಶಾಸಕ ಡಾ. ಸಿದ್ದು ಪಾಟೀಲ ಅವರಿಗೆ ಮನವಿ ಪತ್ರ ಸಲ್ಲಿಸಿ ನಂತರ ಮಾತನಾಡಿದ

ತಾಲ್ಲೂಕಿನ ಗ್ರಾಮ ಪಂಚಾಯಿತಿಗಳಲ್ಲಿ 15ನೇ ಹಣಕಾಸು ಯೋಜನೆಯ ಒಟ್ಟು ಅನುದಾನದಲ್ಲಿ ಜನಸಂಖ್ಯೆಗೆ ಅನುಗುಣವಾಗಿ ಎಸ್‌ಸಿ/ಎಸ್‌ಟಿ ಉಪಯೋಜನೆಗಳಿಗೆ (ಎಸ್‌ಸಿಪಿ/ಟಿಎಸ್‌ಪಿ) ಹಣವನ್ನು ಕಾಯ್ದಿರಿಸಿ ಆ ಸಮುದಾಯಗಳ ಅಭಿವೃದ್ಧಿಗೆ ಬಳಸ–ಬೇಕಾಗಿರುವುದು ಕಾನೂನುಬದ್ಧ ನಿಯಮವಾಗಿದೆ. ಆದರೆ, 2025–2026ನೇ ಸಾಲಿನ ಅಧಿಕೃತ ಕ್ರಿಯಾ ಯೋಜನೆ ವರದಿಯಲ್ಲಿ ಅಕ್ರಮಗಳು ಮತ್ತು ಕಾನೂನು ಉಲ್ಲಂಘನೆ ನಡೆದಿದೆ. ಈ ಬಗ್ಗೆ ಸೂಕ್ತ ತನಿಖೆ ನಡೆಸುವಂತೆ ಮೇಲಧಿಕಾರಿಗಳಿಗೆ ಸೂಚನೆ ನೀಡಬೇಕು' ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸುಶೀಲಕುಮಾರ್ ಎಚ್. ಭೋಲಾ, ಸಿದ್ಧಾರ್ಥ ಜಾನವೀರ್, ಅನಂತ್ ಮಾಳಗೆ, ವಿಠಲ್ ಶಿವನಾಯಕ್ , ವಿಶಾಲ್ ಸಿಂಧನಕೇರಾ, ದಶರಥ್ ದಾಂಡೇಕರ್,ಕರಣ್ ಜನವೀರ್, ಮಂಜು, ಯೋಗಿ, ಸಚಿನ್ ಭೋಲಾ, ಪರಮೇಶ್ವರ್ , ಅಮಿತ್ ಆರ್ಯ, ಸೇರಿದಂತೆ ಅನೇಕರು ಇದ್ದರು.

# ಕಳೆದ 3 ವರ್ಷಗಳಲ್ಲಿ 82 ಅಂಗ ವಿಕಲರಿಗೆ ತ್ರಿಚಕ್ರ ವಾಹನ ವಿತರಣೆ: ಶಾಸಕ ಅಲ್ಲಂಪ್ರಭು ಪಾಟೀಲ್



**ಕಲಬುರಗಿ:ಜು.3:** ದಕ್ಷಿಣ ಮತಕ್ಷೇತ್ರದಲ್ಲಿ ಬರುವ 12 ಜನ ಅಂಗವಿಕಲರಿಗೆ ಶಾಸಕರಾದ ಅಲ್ಲಂಪ್ರಭು ಪಟೀಲರು ಜಿಲ್ಲಾ ಡಿಂಎಫ್ ನಿಧಿಯಲ್ಲಿ ಖರೀದಿಸಿ ವಿತರಿಸಿದರು.

ಡೀಸಿ ಕಚೇರಿ ಆವರಣದಲ್ಲಿರುವ ಶಾಸಕರ ಕಚೇರಿ ಅಂಗಳದಲ್ಲಿ ಗುರುವಾರ ಸಜೆ ನಡೆದ ಸಮಾರಂಭದಲ್ಲಿ ಶಾಸಕ ಅಲ್ಲಂಪ್ರಭು ಪಾಟೀಲರು ಅರ್ಹ ಅಂಗವಿಕಲರಿಗೆ ತ್ರಿಚಕ್ರ ವಾಹನಗಳನ್ನು ವಿತರಿಸಿದರು.

ತಮ್ಮ ಸರ್ಕಾರ ಬಂದಮೇಲೆ ಮೊದಲ ವರ್ಷ 35, ನಂತರದಲ್ಲಿ ಉಸ್ತುವಾರಿ ಸಚಿವರ ಸಮ್ಮುಖದಲ್ಲಿ 35 ವಾಹನಗಳನ್ನು ವಿತರಿಸಿದ್ದೇವು. ಇದೀಗ ವಿತರಿಸಿದ 12 ವಾಹನಗಳು ಸೇರಿದಂತೆ ಇದುವರೆಗೂ 82 ಅಂಗವಿಕಲರಿಗೆ ವಾಹನಗಳನ್ನು ನೀಡಿ ಅವರಿಗೆ ಬೆಂಬಲಿಸಲಾಗಿದೆ ಎಂದು ಶಾಸಕರು ನುಡಿದರು.

ಪಾಲಿಕೆ ವ್ಯಾಪ್ತಿಯ 55 ವಾರ್ಡ್ ಹಾಗೂ 28 ಹಲಳಿಗಳು ಸೇರಿದಂತೆ ದಕ್ಷಿಣ ಮತಕ್ಷೇತ್ರದ ವ್ಯಾಪ್ತಿಯ ಎಲ್ಲಾ ಕಡೆಗಳಲ್ಲಿರುವ ಅಂಗವಿಕಲರಿಗೆ ಅನುಕೂಲವಾಗಿಸಲು, ಅವರು ವಾಹನದ ನೆರವಿನಿಂದ ತಮ್ಮ ದಿನದ ಕೆಲಸಗಳಲ್ಲಿ ತೊಡಗಲು ಅನುಕೂಲ ಕಲ್ಪಿಸಲಾಗಿದೆ. ಮುಂಬರುವ ದಿನಗಳಲ್ಲಿ ಉಳಿದ ಅಂಗವಿಕಲರಿಗೂ ವಾಹನಗಳನ್ನು ನೀಡಲಾಗುತ್ತದೆ.

ಕಲಬುರಗಿ ದಕ್ಷಿಣ ಮತಕ್ಷೇತ್ರದಲ್ಲಿ ಯಾರೂ ಅಂಗವಿಕಲರು ವಾಹನ ಇಲ್ಲದೆ ಹೊರಗೆ ಬರಬಾರದು. ಅರ್ಹರು ಹಾಗೂ ಕಾನೂನಿನಂತೆ ಅಂಗವೈಕಲ್ಯ ಪ್ರಮಾಣ ಹೊಂದಿದವರಿಗೆ ವಾಹನ ನೀಡಲು ತಾವು ಕ್ರಮ ಜರುಗಿಸೋದಾಗಿ ಅಲ್ಲಂಪ್ರಭು ಹೇಳಿದರು. ಅರ್ಹ ಇಬ್ಬರು ಅಂಗವಿಕಲರಿಗೆ ರಾಶಿ ಯಂತ್ರ ನೀಡಲಾಗುತ್ತಿದೆ ಎಂದು ಶಾಸಕರು ಹೇಳಿದರು.

ತಮಗೆ ತ್ರಿಚಕ್ರ ವಾಹನ ನೀಡಿರೋದು ಖುಷಿ ಕೊಟಟಿದೆ. ಇದು ತ್ರಿಚಕ್ರ ವಾಹನವಲ್ಲ, ಕಾರ್ ಎಂದು ತಾವು ಅರಿತು ಸಂತಸದಲ್ಲಿದ್ದೇವೆ ಎಂದು ವಾಹನ ಪಡೆದ ಫಲಾನುಭವಿಗಳು ಸಂತಸ ಹೊರಹಾಕಿದ್ದಾರೆ. ಈ ಸಂದರ್ಭದಲ್ಲಿ ಲಾಲ್ ಅಹ್ಮದ್ ಬಂಬೆ ಶೇಠ್ ಹಾಗೂ ಕಾಂಗ್ರೆಸ್ ವಿವಿಧ ಹಂತದ ಮುಕಂಡರು ಹಾಜರಿದ್ದರು.

# ಹರಿದಾಸ ಸಂಪದ ಪ್ರಶಸ್ತಿ ಪ್ರದಾನ



**ಕಲಬುರಗಿ:ಜು.3:** ಕನ್ನಡ ಹರಿದಾಸ ಸಾಹಿತ್ಯದ ಹರಿಕಾರರಾದ ಶ್ರೀಪಾದರಾಜರ ಆರಾಧನಾ ದಿನವನ್ನು ದಾಸ ಸಾಹಿತ್ಯ ಸಾಂಸ್ಕೃತಿಕ ಪ್ರತಿಷ್ಠಾನ 'ದಾಸ ಸಾಹಿತ್ಯ ದಿನ' ವನ್ನಾಗಿ ಈಚೆಗೆ ಇಲ್ಲಿ ವೈಭವದಿಂದ ಆಚರಿಸಿತು.

ಇಲ್ಲಿಯ ಕರುಣೇಶ್ವರ ನಗರದ ಜೈವೀರ ಹನುಮಾನ್ ಮಂದಿರದಲ್ಲಿ ನಡೆದ ವರ್ಣರಂಜಿತ ಕಾರ್ಯಕ್ರಮದಲ್ಲಿ ಪ್ರತಿಷ್ಠಾನವು ಇದೇ ಮೊದಲ ಬಾರಿಗೆ ಪ್ರತಿಷ್ಠಾಪಿಸಿರುವ ರಾಜ್ಯ ಮಟ್ಟದ 'ಹರಿದಾಸ ಸಂಪದ' ಪ್ರಶಸ್ತಿಯನ್ನು ನಾಡಿನ ಸುವಿಖ್ಯಾತ ಹಿಂದುಸ್ತಾನಿ ಶಾಸ್ತ್ರೀಯ ಸಂಗೀತಗಾರರೂ, ನಿವೃತ್ತ ಐ.ಎ.ಎಸ್. ಅಧಿಕಾರಿಗಳೂ ಆದ ಡಾ.ಮುದ್ದುಮೋಹನ ಅವರಿಗೆ ಅವರು ಶಾಸ್ತ್ರೀಯ ಸಂಗೀತಕ್ಕೆ ಮತ್ತು ದಾಸರ ಹಾಡುಗಳಿಗೆ ಧ್ವನಿಯಾಗಿ ದಾಸ ಸಾಹಿತ್ಯಕ್ಕೆ ಸಲ್ಲಿಸಿದ ಅನನ್ಯ ಸೇವೆಯನ್ನು ಪರಿಗಣಿಸಿ ಪ್ರದಾನ ಮಾಡಲಾಯಿತು. ಹನ್ನೊಂದು ಸಾವಿರ ರೂಪಾಯಿ ನಗದು, ಪ್ರಶಸ್ತಿ ಫಲಕ ಮತ್ತು ಸನ್ಮಾನವನ್ನು ಪ್ರಶಸ್ತಿ ಒಳಗೊಂಡಿದೆ.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಪ್ರಾಯೋಜಕತ್ವದಲ್ಲಿ ಡಾ.ಮುದ್ದುಮೋಹನ ಅವರು ಶಾಸ್ತ್ರೀಯ ಸಂಗೀತ ಹಾಗೂ ದಾಸವಾಣಿಯನ್ನು ತಮ್ಮ ಸುಶ್ರಾವ್ಯ ಕಂಠದಲ್ಲಿ ನಡೆಸಿಕೊಟ್ಟು ಸಂಗೀತ ಮತ್ತು ದಾಸಾಭಿಮಾನಿಗಳನ್ನು ಮಂತ್ರಮುಗ್ಧರನ್ನಾಗಿ ಮಾಡಿದರು.

ನೂಪುರ ನೃತ್ಯ ಸಂಗೀತ ಸಂಸ್ಥೆಯ ಸೌಖ್ಯಾ ಪ್ರವೀಣ ಕುಲಕರ್ಣಿ ತಂಡದ ಯುವ ಕಲಾವಿದೆಯರು ಶ್ರೀಪಾದರಾಜರ ಕೀರ್ತನೆಗಳ ನೃತ್ಯ ರೂಪಕಗಳನ್ನು ಅದ್ಭುತವಾಗಿ ಪ್ರದರ್ಶಿಸಿದರು.

ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಡಾ.ಮುದ್ದುಮೋಹನ ಅವರು ದಾಸ ಸಾಹಿತ್ಯ, ಸಂಸ್ಕೃತಿ ಪ್ರಸಾರಕ್ಕೆ ಕಂಕಣಬದ್ಧವಾಗಿ ಸೇವೆ ಸಲ್ಲಿಸುತ್ತಿರುವ ಪ್ರತಿಷ್ಠಾನದ ಕಾರ್ಯವನ್ನು ಶ್ಲಾಘಿಸಿದರು. ತಮಗೆ ನೀಡಿರುವ ' ಹರಿದಾಸ ಸಂಪದ' ಪ್ರಶಸ್ತಿ ತಾವು ಪಡೆದಿರುವ ಪ್ರಶಸ್ತಿಗಳಲ್ಲಿ ಅತ್ಯಂತ ಪ್ರಮುಖವಾದದ್ದು ಎಂದು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ವಿಶ್ವ ಹಿಂದು ಪರಿಷತ್ತಿನ ಕರ್ನಾಟಕ ಉತ್ತರ ಪ್ರಾಂತದ ಅಧ್ಯಕ್ಷರಾದ ಶ್ರೀ ಶರಣಬಸವೇಶ್ವರ ಸಂಸ್ಥಾನದ ಲಿಂಗರಾಜ ಬಸವರಾಜಪ್ಪ ಅಪ್ಪಾ ಅವರು ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಹರಿದಾಸರ ಮತ್ತು ಶರಣರ ತತ್ವಾದರ್ಶಗಳು ಎಂದಿಗೂ ಪ್ರಸ್ತುತವಾಗಿ ಉಳಿದುಕೊಂಡಿವೆ ಎಂದು ತಿಳಿಸಿದರು.

ಪ್ರತಿಷ್ಠಾನದ ಉಪಾಧ್ಯಕ್ಷರಾದ ನಿವೃತ್ತ ಇಂಜಿನಿಯರಿಂಗ್ ಪ್ರಾಧ್ಯಾಪಕ ವ್ಯಾಸರಾಜ ಸಂತೆಕೆಲ್ಲೂರ ಅವರು ದಾಸ ಸಾಹಿತ್ಯಕ್ಕೆ ಶ್ರೀಪಾದರಾಜರ ಕೊಡುಗೆ ಕುರಿತು ಮಾತನಾಡಿ ಭಕ್ತಿ ಪರಂಪರೆಯ ಸಾಹಿತ್ಯ ಮತ್ತು ಪೌರಾಣಿಕ ಸಾಹಿತ್ಯ ಸಂಸ್ಕೃತಕ್ಕಷ್ಟೇ ಸೀಮಿತವಾಗಿದ್ದ ಕಾಲದಲ್ಲಿ ಜನಸಾಮಾನ್ಯರ ಭಾಷೆಯಾದ ಕನ್ನಡದಲ್ಲಿ ಕಟ್ಟಿಕೊಡುವ ದಿಟ್ಟ ನಿರ್ಧಾರವನ್ನು ಕೈಕೊಂಡು ಒಂದು ಕ್ರಾಂತಿಯನ್ನೇ ಉಂಟು ಮಾಡಿದರು. ಈ ಮೂಲಕ ಶ್ರೀಪಾದರಾಜರು ಭವಿಷ್ಯದ ದಾಸ ಸಾಹಿತ್ಯದ ಸಮೃದ್ಧ ನಿರ್ಮಾಣಕ್ಕೆ ಭದ್ರ ಬುನಾದಿ ಹಾಕಿದರೆಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರತಿಷ್ಠಾನದ ಅಧ್ಯಕ್ಷರಾದ ಶ್ರೀನಿವಾಸ ಸಿರನೂರಕರ್ ಅವರು ಇದೇ ಮೊದಲ ಬಾರಿಗೆ ಕರ್ನಾಟಕದಲ್ಲಿ ಶ್ರೀಪಾದರಾಜರ ಆರಾಧನಾ ದಿನವನ್ನು ಪ್ರತಿ ವರ್ಷ ದಾಸ ಸಾಹಿತ್ಯ ದಿನವನ್ನಾಗಿ ಆಚರಿಸಲು ಮಹತ್ವದ ನಿರ್ಧಾರ ಕೈಗೊಂಡಿದೆ ಎಂದು ತಿಳಿಸಿದರು. ಈ ದಿನವನ್ನು ಆಚರಿಸುವಂತೆ ಅವರು ರಾಜ್ಯ ಸರಕಾರವನ್ನು ಒತ್ತಾಯಿಸಿದರು. ನಾಡಿನ ಪ್ರಖ್ಯಾತ ವಿದ್ವಾಂಸರಾದ ಪ್ರೊ??. ಎ.ವಿ.ನಾವಡ, ಡಾ.ಕೃಷ್ಣ ಕೊಲ್ಹಾರ ಕುಲಕರ್ಣಿ ಹಾಗು ವಿದ್ಯಾವಾಚಸ್ಪತಿ ಡಾ.ಅರಳುಮಲ್ಲಿಗೆ ಪಾರ್ಥಸಾರಥಿ ಅವರು ಕಾರ್ಯಕ್ರಮಕ್ಕೆ ಶುಭ ಕೋರಿ ಕಳುಹಿಸಿದ ಸಂದೇಶವನ್ನು ಓದಿದರು.

ಪ್ರತಿಷ್ಠಾನದ ಗೌರವಾಧ್ಯಕ್ಷ ಡಾ.ಸ್ವಾಮಿರಾವ ಕುಲಕರ್ಣಿ ಪ್ರಾಸ್ತಾವಿಕವಾಗಿ ಮಾತನಾಡಿ ಸ್ವಾಗತ ಕೋರಿದರು. ಶಾರದಾ ಸಂಗೀತ ವಿದ್ಯಾಲಯದ ವಿದ್ಯಾರ್ಥಿಗಳು ಪ್ರಾರ್ಥನಾ ಗೀತೆಯನ್ನು ಹಾಡಿದರು. ಪ್ರತಿಷ್ಠಾನದ ಖಜಾಂಚಿ ಕೆ.ಪಿ.ಗಿರಿಧರ, ಪ್ರಧಾನ ಕಾರ್ಯದರ್ಶಿ ನಾರಾಯಣ ಕುಲಕರ್ಣಿ, ಜೈವೀರ ಹನುಮಾನ್ ದೇವಸ್ಥಾನ ಅಭಿವೃದ್ಧಿ ಸಮಿತಿ ಅಧ್ಯಕ್ಷ ಅವಿನಾಶ ಕುಲಕರ್ಣಿ ಉಪಸ್ಥಿತರಿದ್ದರು. ಕಾರ್ಯದರ್ಶಿ ಡಾ.ಸುನಂದಾ ಸಾಲವಾಡಗಿ ಕಾರ್ಯಕ್ರಮ ನಿರೂಪಿಸಿದರು. ಕೆ.ಪಿ.ಗಿರಿಧರ ವಂದಿಸಿದರು.

ಭಾರತದ ಸುವಿಖ್ಯಾತ ಸ್ಥಪತಿ ಮಾನಯ್ಯ ಬಡಿಗೇರ, ಶಿಕ್ಷಣ ತಜ್ಞ ಡಾ.ಪ್ರಹ್ಲಾದ ಭುರ್ಲಿ, ನಾಡಿನ ಸುವಿಖ್ಯಾತ ನೃತ್ಯ ವಿದುಷಿ ಶುಭಾಂಗಿ ಸುಧೀಂದ್ರ,ಖ್ಯಾತ ಕಥೆಗಾರ್ತಿ ಸಂಧ್ಯಾ ಹೊನಗುಂಟೀಕರ್,ಸಂಗೀತ ಕಲಾವಿದರಾದ ರಮೇಶ ಕುಲಕರ್ಣಿ, ಮಹೇಶ ಬಡಿಗೇರ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ಸುದ್ದಿ ಮತ್ತು
ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಶರಣರ ಜ್ಞಾನ ಭಂಡಾರ ಜಗತ್ತಿಗೆ ಪರಿಚಯಿಸಿದ ' ವಚನ ಪಿತಾಮಹ ' ಡಾ. ಫ.ಗು. ಹಳಕಟ್ಟಿ



**ಕಲಬುರಗಿ, ಜು, 03:** ಪ್ರಸಿದ್ಧ ಸಾಹಿತಿ ಬಿ. ಎಂ. ಶ್ರೀಕಂಠಯ್ಯನವರು ವಿಜಯಪುರಕ್ಕೆ ಬಂದಾಗ, ಶರಣರ ಜ್ಞಾನದ ರಾಶಿಯನ್ನು ಕಷ್ಟಪಟ್ಟು ಸಂಗ್ರಹಿಸಿ, ನಾಡಿಗೆ ಉಣಬಡಿಸಿದ 'ವಚನ ಪಿತಾಮಹ' ಡಾ. ಫ.ಗು. ಹಳಕಟ್ಟಿ ಎಂದು ಮಹಾರಾಷ್ಟ್ರದ ಸೋಲಾಪುರ ಜಿಲ್ಲೆಯ ಅಕ್ಕಲಕೋಟ ತಾಲ್ಲೂಕಿನ ಷಬ್ರಡಾ: ಶ್ರೀ ಅಭಿನವ ರಾಮಲಿಂಗ ಪಟ್ಟದೇವರು (ಡಾ. ಈಶ್ವರಾನಂದ ಮಹಾಸ್ವಾಮಿಗಳು ) ಶ್ರೀ ರಾಮಲಿಂಗ ಶಿವಶರಣ ಮಠ, ಸಾ. ಮು. ಸಲಗರ, ಪ.ಬ್ರ.ಡಾ. ಶ್ರೀ ಅಭಿನವ ರಾಮಲಿಂಗ ಪಟ್ಟದೇವರು ಅವರು ವಿಶೇಷ ಉಪನ್ಯಾನಸ ನೀಡಿ ಮಾತನಾಡಿದರು.

ಗುರುವಾರ ನಗರದ ಎಸ್.ಎಮ್.ಪಂಡಿತ ರಂಗಮಂದಿರದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಕಲಬುರಗಿ ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಡಾ. ಫ.ಗು. ಹಳಕಟ್ಟಿಯವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತಾನಾಡಿದರು.

ಹಳಕಟ್ಟಿಯವರು ಧಾರವಾಡದಲ್ಲಿ ಜನಿಸಿ, ವಕೀಲಿ ವೃತ್ತಿ ಆರಂಭಿಸಿದ ಇವರು ಬಿಜಾಪುರಕ್ಕೆ ಸ್ಥಳಾಂತರಗೊಂಡಾಗ, ಮನೆಯೊಂದರ ಜಗಲಿಯಲ್ಲಿದ್ದ ಅಲ್ಲಮಪ್ರಭುಗಳ ತಾಡೋಲೆಗಳನ್ನು ಕಂಡು ಪ್ರೇರಿತರಾದರು.ಅಂದಿನ ಕಾಲದಲ್ಲಿ ಕೇವಲ ಪೂಜಾ ವಸ್ತುವಾಗಿದ್ದ ವಚನ ಕಟ್ಟುಗಳನ್ನು ಕಷ್ಟಪಟ್ಟು ಸಂಗ್ರಹಿಸಿ, ಪರಿಷ್ಕರಿಸಿ ಮುದ್ರಿಸುವ ಮೂಲಕ ಬಸವಣ್ಣ ಹಾಗೂ ಶರಣರ ವಿಚಾರಧಾರೆಗಳನ್ನು ಜಗತ್ತಿಗೆ ಪರಿಚಯಿಸಿದರು.

ಮಂಗಳೂರಿನ ಮುದ್ರಣಾಲಯ ವಚನ ಮುದ್ರಣಕ್ಕೆ ನಿರಾಕರಿಸಿದಾಗ ಧೃತಿಗೆಡದ ಅವರು, 1923 ರಿಂದ 1953 ರವರೆಗೆ 'ವಚನಶಾಸ್ತ್ರ ಸಾರ', 'ಮಹಾದೇವಿಯಕ್ಕಗಳ ಗ್ರಂಥ' ಸೇರಿದಂತೆ ಅನೇಕ ಕೃತಿಗಳನ್ನು ಹೊರತಂದರು ನಂತರ ವಿಜಯಪುರದಲ್ಲಿ ತಾವೇ ಸ್ವತಃ "ಹಿತಚಿಂತಕ" ಮುದ್ರಣಾಲಯ ಸ್ಥಾಪಿಸಿದರು ಎಂದು ಸ್ಮರಿಸಿದರು.

ತಮ್ಮ ಜೀವನದ 17 ವರ್ಷಗಳ ನಿರಂತರ ಹೋರಾಟದ ಮೂಲಕ 200ಕ್ಕೂ ಹೆಚ್ಚು ಅಪ್ರಸಿದ್ಧ ವಚನಕಾರರನ್ನು, 22 ಸಾವಿರಕ್ಕೂ ಅಧಿಕ ವಚನಗಳನ್ನು ಪರಿಷ್ಕರಿಸಿ ನಾಡಿಗೆ ಪರಿಚಯಿಸಿದ ಕೀರ್ತಿ ಇವರಿಗೆ ಸಲ್ಲುತ್ತದೆ ಎಂದು ಶ್ಲಾಘಿಸಿದರು.

ಹಿರಿಯ ಸಾಹಿತಿ ಅಪ್ಪಾರಾವ್ ಅಕ್ಕೋಣೆ ಅವರು ಮಾತನಾಡಿ, 12ನೇ ಶತಮಾನದ ಶರಣರ ವಚನ ಸಾಹಿತ್ಯಕ್ಕೆ ಮರುಜೀವ ನೀಡಿದ ಮಹಾಚೇತನ, ಸಾಮಾಜಿಕ ಮತ್ತು ರಾಜಕೀಯ ಕ್ಷೇತ್ರದಲ್ಲೂ ಸಕ್ರಿಯರಾಗಿದ್ದ ಇವರು, ಬಾಂಬೆ ವಿಧಾನ ಪರಿಷತ್ ಸದಸ್ಯರಾಗಿ ಹಾಗೂ ಬಿಜಾಪುರ ನಗರಸಭೆ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು. ಇವರ ಜನಪರ ಕಾರ್ಯಗಳನ್ನು ಗೌರವಿಸಿ ಬ್ರಿಟಿಷ್ ಸರ್ಕಾರ ಇವರಿಗೆ "ರಾವ್ ಬಹದ್ದೂರ್" ಪ್ರಶಸ್ತಿ ನೀಡಿ ಗೌರವಿಸಿತ್ತು. ಕನ್ನಡ ಸಾಂಸ್ಕೃತಿಕ ಪರಂಪರೆಗೆ ಇವರ ಕೊಡುಗೆ ಅಪೂರ್ವವಾಗಿದೆ ಎಂದು ಹೇಳಿದರು.

ಜಿಲ್ಲಾಧಿಕಾರಿ ಕಚೇರಿ ಸಹಾಯಕರಾದ ಶಿವಪ್ರಭು ಹಿರೇಮಠ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಗದೀಶ್ವರ ನಾಶಿ,ವೇದಿಕೆ ಮೇಲೆ ಸಮಾಜದ ಮುಖಂಡರಾದ ಚೆನ್ನಾಮಲ್ಲಪ್ಪ, ಡಾ.ಬಸವರಾಜ ಚೆನ್ನ, ಸತೀಶ್ ಜಮಖಂಡಿ, ಚಂದ್ರಶೇಖರ, ಸೋಮಶೇಖರ್. ಬಿ. ಧತ್ತರ್ಗಿ, ಶ್ರವಣ ಕುಮಾರ,ಸಿದ್ದರೂಢ ಮುನ್ನಳ್ಳಿ, ಚಂದ್ರಕಾಂತ ಮುನ್ನಳ್ಳಿ ಇತರರು ಉಪಸ್ಥಿತರಿದ್ದರು.

ಕಲಬುರಗಿ: ನಗರದ ಸರ್ದಾರ್ ವಲ್ಲಬಾಯ್ ಪಟೇಲ್ ವೃತ್ತದಿಂದ ರಂಗಮಂದಿರವರೆಗೆ ಫ.ಗು. ಹಳಕಟ್ಟಿ ಅವರ ಭಾವಚಿತ್ರ ಹಾಗೂ ವಚನ ಸಾಹಿತ್ಯವನ್ನು ಆನೆಯ ಮೇಲೆ ಮೆರವಣಿಗೆಗೆ ವಿಧಾನ ಪರಿಷತ್ ಶಾಸಕ ಶಶೀಲ್ ಜಿ. ನಮೋಶಿ ಕರ್ನಾಟಕ ರಾಜ್ಯ ಧ್ವಜ ತೋರಿಸುವುದರ ಮೂಲಕ ಚಾಲನೆ ನೀಡಿದರು. ಶಿವರಾಜ್ ಅಂಡಗಿ, ವಿನೋದ್ ಕುಮಾರ್ ಜನವರಿ, ಚನ್ನಮಲ್ಲಪ್ಪ ಯಳಸಂಗಿ, ಸತೀಶ್ ಜಮಖಂಡಿ, ಶ್ರೀನಿವಾಸ್ ಬಲ್ಪುರ್, ಚಂದ್ರಶೇಖರ್ ಮ್ಯಾಳಗಿ, ರಾಜು ಕೋಷ್ಟಿ, ಅನೇಕರಿದ್ದರು.

# ಪ್ಲಾಸ್ಟಿಕ್ ಬಳಕೆಗೆ ಕಡಿವಾಣ ಅಗತ್ಯ

**ಕಲಬುರಗಿ : ಜು.3:** ಪ್ಲಾಸ್ಟಿಕ್ ಬಳಕೆ ಹಳ್ಳಿ, ನಗರ ಸೇರಿದಂತೆ ಎಲ್ಲೆಡೆ ವ್ಯಾಪಕವಾಗಿ ಬಳಕೆಯಾಗುತ್ತಿದೆ. ಇಂದು ಜಗತ್ತನ್ನು ಆಳುತ್ತಿರುವುದು ಪ್ಲಾಸ್ಟಿಕ್ , ಮಣ್ಣಲ್ಲಿ ಕೊಳೆಯದ, ನೀರಲ್ಲಿ ಕರಗದ, ಗಾಳಿಯಲ್ಲಿ ಲೀನವಾಗದೇ ಭೂಮಿಯ ಮೇಲೆ ರಾಶಿ–ರಾಶಿ ಕಸವಾಗಿ, ಮಾಲಿನ್ಯವಾಗಿ ಪರಿಸರವನ್ನು ಹಾಳುಮಾಡುತ್ತಿರುವ ಪ್ಲಾಸ್ಟಿಕ್ ಬಳಕೆಗೆ ಕಡಿವಾಣ ಹಾಕುವುದು ಅಗತ್ಯವಾಗಿದೆ ಎಂದು ಉಪನ್ಯಾಸಕ, ಪರಿಸರ ಪ್ರೇಮಿ ಎಚ್.ಬಿ.ಪಾಟೀಲ ಹೇಳಿದರು.

ನಗರದ ಆಳಂದ ರಸ್ತೆಯ ಜೆ.ಆರ್.ನಗರದಲ್ಲಿರುವ 'ಸಕ್ಸಸ್ ಕಂಪ್ಯೂಟರ್ ತರಬೇತಿ ಕೇಂದ್ರ'ದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ "ಅಂತಾರಾಷ್ಟ್ರೀಯ ಪ್ಲಾಸ್ಟಿಕ್ ಮುಕ್ತ ದಿನಾಚರಣೆ"ಯನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಜಗತ್ತಿನಲ್ಲಿ ಪ್ರತಿನಿತ್ಯ ಕೋಟ್ಯಾಂತರ ಟನ್ ಪ್ಲಾಸ್ಟಿಕ್ ತ್ಯಾಜ್ಯ ಉತ್ಪಾದನೆಯಾಗುತ್ತಿದೆ. ನಿತ್ಯ ನಾವು ಹೀಗೆ ಬಳಸಿ ಬಿಸಾಡುವ ಪ್ಲಾಸ್ಟಿಕ್ ಸಮುದ್ರ, ನದಿ,ಸರೋವರಗಳ ಆಳ, ಭೂಮಿಯ ಮೇಲ್ಪದರು ಮತ್ತು ಗರ್ಭದಲ್ಲಿ ಸೇರಿ,ಇಡೀ ಪರಿಸರವನ್ನೇ ನಾಶ ಮಾಡುತ್ತದೆ. ಜಲಚರಗಳು, ಪ್ರಾಣಿಪಕ್ಷಿಗಳು ಬಳಸಿ ಬಿಸಾಡಿದ ಪ್ಲಾಸ್ಟಿಕ್ ನುಂಗಿ ಸಾವಿಗೆ ಗುರಿಯಾಗುತ್ತವೆ. ಪ್ಲಾಸ್ಟಿಕ್ ಚೀಲಗಳ ಉತ್ಪಾದನೆಯನ್ನು ನಿಲ್ಲಿಸಲು, ನಿಷೆ?ಧವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕಾಗಿದೆ ಎಂದರು.

ಚಿಂದಿ ಆಯುವವರು, ಸ್ಕ್ರಾಪ್ ಡೀಲರ್‌ಗಳನ್ನು ಉತ್ತೇಜಿಸುವ ಅಗತ್ಯವಿದ್ದು, ಮರುಬಳಕೆಯ ಬ್ಯಾಗ್ ಗಳ ಉತ್ಪಾದಿಸಲು ಸ್ಟಾಗಳನ್ನು ಉತ್ತೇಜಿಸಬೇಕು. ಪ್ರಮುಖವಾಗಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದೂ ಕೂಡ ಅತ್ಯಗತ್ಯವಾಗಿದೆ. ಹಲವು ಕಡೆಗಳಲ್ಲಿ ಪ್ಲಾಸ್ಟಿಕ್ ಬದಲಿಗೆ ಬಟ್ಟೆ, ಪೇಪರ್‌ಗಳು ಬಳಕೆಗೆ ಬಂದಿವೆ. ಹಾಗೆ ಪ್ಲಾಸ್ಟಿಕ್ ಬಳಕೆಯಿಂದ ಪರಿಸರಕ್ಕೆ ಮಾತ್ರವಲ್ಲದೆ ಆರೋಗ್ಯಕ್ಕೂ ಹಾನಿ ಎಂಬುದು ಈಗಾಗಲೇ ದೃಢವಾಗಿದೆ. ಪ್ಲಾಸ್ಟಿನಿಂದ ನಾವು ದೂರ ಇದ್ದಷ್ಟು ಉತ್ತಮ. ಹಾಗೆ ಇಡೀ ವಿಶ್ವವನ್ನು ಪ್ಲಾಸ್ಟಿಕ್ ಮುಕ್ತವರ್ಷ ಮಾಡಲು ಎಲ್ಲರು ಪ್ರಯತ್ನಿಸಬೇಕಾಗಿದೆ. ನಮ್ಮ ಭೂಮಿ ಮೇಲೆ 430 ಮಿಲಿಯನ್ ಟನ್ ಪ್ಲಾಸ್ಟಿಕ್ ಉತ್ಪಾದನೆಯಾಗುತ್ತಿದೆ ಎಂದು ತಿಳಿಸಿದರು.



ಕಾರ್ಯಕ್ರಮದಲ್ಲಿ ಅಧ್ಯಕ್ಷ ಅಸ್ಲಾಂ ಶೇಖ್, ಶಿಕ್ಷಕಿಯರಾದ ಪೂಜಾ ಹೂಗಾರ, ಕಾವೇರಿ ಹೌದೆ, ಮುಸ್ಕಾನ್ ಶೇಖ್ ಹಾಗೂ ವಿದ್ಯಾರ್ಥಿಗಳು ಇದ್ದರು.

# ಸಮಾಜಕ್ಕೆ ವೈದ್ಯರು ಹಾಗೂ ಪತ್ರಕರ್ತರ ಕೊಡುಗೆ ಅಪಾರ: ಮಲ್ಲಣ್ಣ ಐಕೂರ

**ಯಾದಗಿರಿ:** ವೈದ್ಯರು ಮತ್ತು ಪತ್ರಕರ್ತರು ಸಮಾಜದ ಎರಡು ಪ್ರಮುಖ ಸ್ತಂಭಗಳಾಗಿದ್ದು, ಅವರ ಸೇವೆ ಸಮಾಜದ ಅಭಿವೃದ್ಧಿಗೆ ಅನನ್ಯ ಕೊಡುಗೆಯಾಗಿದೆ ಎಂದು ಕುರುಬ ಸಂಘದ ಜಿಲ್ಲಾಧ್ಯಕ್ಷ ಮಲ್ಲಣ್ಣ ಐಕೂರ ಹೇಳಿದರು.

ನಗರದ ನಾಯ್ಕೋಡಿ ಆಸ್ಪತ್ರೆಯಲ್ಲಿ ವೈದ್ಯರ ದಿನಾಚರಣೆ ಹಾಗೂ ಪತ್ರಿಕಾ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ವೈದ್ಯರು ಕಣ್ಣಿಗೆ ಕಾಣುವ ದೇವರುಗಳಂತೆ ರೋಗಿಗಳ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ಹಗಲಿರುಳು ಶ್ರಮಿಸುತ್ತಾರೆ. ಅವರ ಸೇವೆ ಮಾನವೀಯತೆಯ ಪ್ರತೀಕವಾಗಿದೆ ಎಂದು ಹೇಳಿದರು.ದೇಶ ಮತ್ತು ಸಮಾಜದ ಅಭಿವೃದ್ಧಿಯಲ್ಲಿ ಪತ್ರಕರ್ತರ ಪಾತ್ರವೂ ಅತ್ಯಂತ ಮಹತ್ವದ್ದಾಗಿದೆ. ತಮ್ಮ ನೇರ, ನಿಷ್ಠುರ ಹಾಗೂ ಜವಾಬ್ದಾರಿಯುತ ಬರವಣಿಗೆಯ ಮೂಲಕ ಸಮಾಜದಲ್ಲಿನ ಅಕ್ರಮ, ಅವ್ಯವಸ್ಥೆ ಮತ್ತು ಸಮಸ್ಯೆಗಳನ್ನು ಬೆಳಕಿಗೆ ತಂದು, ಅವುಗಳ ನಿವಾರಣೆಗೆ ದಾರಿ ಮಾಡಿಕೊಡುವ ಮೂಲಕ ಸಮಾಜದ ಪರಿವರ್ತನೆಗೆ ಪತ್ರಕರ್ತರು ಪ್ರಮುಖ ಪಾತ್ರ ವಹಿಸುತ್ತಾರೆ ಎಂದು ಅವರು ತಿಳಿಸಿದರು.ಕಾರ್ಯಕ್ರಮದಲ್ಲಿ ಮಾತನಾಡಿದ ಡಾ. ರಾಹುಲ್ ಎಸ್. ನಾಯ್ಕೋಡಿ, ವೈದ್ಯರು ಮತ್ತು ಪತ್ರಕರ್ತರು ಸಮಾಜದ ಎರಡು ಕಣ್ಣುಗಳಿದ್ದಂತೆ. ಜನಸೇವೆಯೇ ಧ್ಯೇಯವಾಗಿಸಿಕೊಂಡು ಎರಡೂ ವೃತ್ತಿಯವರು ನಿರಂತರವಾಗಿ ಸಮಾಜದ ಒಳಿತಿಗಾಗಿ ದುಡಿಯುತ್ತಿದ್ದಾರೆ. ಪ್ರತಿಯೊಬ್ಬ ನಾಗರಿಕರು ವೈದ್ಯರು ಮತ್ತು ಪತ್ರಕರ್ತರನ್ನು ಗೌರವದಿಂದ ಕಾಣಬೇಕು ಎಂದು ಕರೆ ನೀಡಿದರು.



ಈ ಸಂದರ್ಭದಲ್ಲಿ ಬಸವರಾಜ ಕಾವಲಿ, ಭೀಮರಾಯ ಜಂಗಳಿ, ಬಸಲಿಂಗಪ್ಪ ನಾಯಕ್ ಹುಲಕಲ್, ಭೀಮಣ್ಣ ಲಕ್ಷ್ಮಂಪುರ, ಮಾಳಪ್ಪ ಪೂಜಾರಿ ಗೋಡಿಹಾಳ ಹಾಗೂ ನಾಯ್ಕೋಡಿ ಆಸ್ಪತ್ರೆಯ ವೈದ್ಯರು, ಸಿಬ್ಬಂದಿ ಮತ್ತು ಗಣ್ಯರು ಉಪಸ್ಥಿತರಿದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE